ಸಂಪುಟ : 9 ಸಂಚಿಕೆ 164 ಪುಟ : 4 ಬೆಲೆ: 3.00 ರವಿವಾರ ಆಗಸ್ಟ್ 4 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 164 Pages : 4 Price : 3.00 Sunday August 4 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25


### ಪ್ರವಾಹ ಪೀಡಿತ ಕೊಣ್ಣೂರ, ಲಕಮಾಪುರ, ವಾಸನ ಗ್ರಾಮಗಳಿಗೆ ಸಚಿವ ಎಚ್.ಕೆ. ಪಾಟೀಲ ಭೇಟಿ | ಲಕಮಾಪುರದಲ್ಲಿ ಅಗತ್ಯ ದಿನಸಿ ಕಿಟ್ ವಿತರಣೆ

# ಗ್ರಾಮದ ನಿವಾಸಿಗಳಿಗೆ ಶಾಶ್ವತ ಪರಿಹಾರಕ್ಕೆ ಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ನರಗುಂದ ತಾಲೂಕಿನ ಪ್ರವಾಹಪೀಡಿತ ಕೊಣ್ಣೂರ, ಲಕಮಾಪುರ, ವಾಸನ ಗ್ರಾಮಗಳಿಗೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಶನಿವಾರ ಭೇಟಿ ನೀಡಿ ಪರಿಸ್ಥಿತಿಯ ಕುರಿತು ಅವಲೋಕನ ನಡೆಸಿದರು.

ಕೊಣ್ಣೂರು ಗ್ರಾಮದ ಪ್ರವಾಹ ಪೀಡಿತ ಪ್ರದೇಶದಲ್ಲಿ ಪರಿಶೀಲನೆ ನಡೆಸಿದ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ತೀವ್ರ ಮಳೆಯಿಂದ ಅಲ್ಲಲ್ಲಿ ಸಮಸ್ಯೆ ಆಗಿದೆ. ಖಾನಾಪೂರ ಭಾಗದಲ್ಲಿ ಹೆಚ್ಚಿನ ಮಳೆ ಆಗಿದ್ದರಿಂದ ಮಲಪ್ರಭಾ ನದಿಗೆ ಹೆಚ್ಚು ನೀರು ಹರಿದು ಬಂದಿದೆ. ಡ್ಯಾಂ ಭರ್ತಿ ಆಗಲು ಕೇವಲ 2ರಿಂದ 3 ಅಡಿ ಮಾತ್ರ ಬಾಕಿ ಇದೆ. ಸದ್ಯ 8–10 ಮನೆಗಳಿಗೆ ನೀರು ನುಗ್ಗಿದೆ. ಸುದೈವದಿಂದ ಇದುವರೆಗೆ ಯಾವುದೇ ವಿಧದ ತೀವ್ರ ಹಾನಿಯಾಗಿಲ್ಲ. ಆದರೂ ಮುಂಜಾಗ್ರತಾ ಕ್ರಮಗಳನ್ನು ಜಿಲ್ಲಾಡಳಿತ ಕೈಗೊಂಡಿದೆ. ಹಾನಿ ಪ್ರದೇಶದ ಗ್ರಾಮಸ್ಥರ ಜೊತೆ ಜಿಲ್ಲಾಡಳಿತ ನಿರಂತರ ಸಂಪರ್ಕದಲ್ಲಿದ್ದು, ವಾಸ್ತವ ಸ್ಥಿತಿಯನ್ನು ಅರಿಯಲಿದೆ ಎಂದರು.





> ಮಲಪ್ರಭಾ ನದಿಯಲ್ಲಿ ಸಾಕಷ್ಟು ಪ್ರಮಾಣದಲ್ಲಿ ಹೂಳು ತುಂಬಿದೆ. ಇದರಿಂದ ಪದೇ ಪದೇ ಈ ಭಾಗದ ಜನರು ಸಂಕಷ್ಟದ ಪರಿಸ್ಥಿತಿ ಎದುರಿಸುತ್ತಾರೆ. ರಾಜ್ಯ ಸರ್ಕಾರ ಮಲಪ್ರಭಾ ನದಿಯಲ್ಲಿನ ಹೂಳು ಎತ್ತುವ ಪ್ರಯತ್ನ ಹಾಗೂ ಅಗಲೀಕರಕರಣಕ್ಕೆ ಕ್ರಮ ಕೈಗೊಳ್ಳಲಿದೆ. ನದಿ ತೀರದಲ್ಲಿ ಅವಘಡ ಸಂಭವಿಸುವ ಮುನ್ನ ಮುಂಜಾಗ್ರತಾ ಕ್ರಮವನ್ನು ನಮ್ಮ ಸರ್ಕಾರ ಕೈಗೊಳ್ಳುತ್ತಿದೆ.
>
> – ಡಾ. ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು, ಗದಗ.

ನಂತರ ಸಚಿವ ಎಚ್.ಕೆ. ಪಾಟೀಲರು ಲಖಮಾಪೂರ, ವಾಸನ ಗ್ರಾಮದ ಹಾನಿ ಪ್ರದೇಶಗಳಿಗೆ ಭೇಟಿ ನೀಡಿದರು. ಲಖಮಾಪೂರ ಗ್ರಾಮದ ಕೆಲವು ಮನೆಗಳಿಗೆ ಈಗಾಗಲೇ ನೀರು ನುಗ್ಗಿದ್ದು, ಮನೆ ಹಾನಿಯಾದ ಕುಟುಂಬ ಸದಸ್ಯರೊಂದಿಗೆ ಚರ್ಚೆ ನಡೆಸಿದರು. ಗ್ರಾಮದ ನಿವಾಸಿಗಳಿಗೆ ಶಾಶ್ವತ ಪರಿಹಾರ ಒದಗಿಸುವ ಕುರಿತಂತೆ ಅಧಿಕಾರಿಗಳೊಂದಿಗೆ ಚರ್ಚಿಸಲಾಗುವುದು ಎಂದರು.

> ಜಿಲ್ಲೆಯ ನರಗುಂದ ತಾಲೂಕಿನ ಕೋಣ್ಣೂರ ಗ್ರಾಮದ ಜಮೀನುಗಳಿಗೆ ಮಲಪ್ರಭಾ ನದಿ ನೀರು ನುಗ್ಗಿದ್ದರಿಂದ ಅಪಾರ ಪ್ರಮಾಣದ ಬೆಳೆಗಳು ನಾಶವಾಗಿವೆ. ಸುಮಾರು 4–5 ವರ್ಷಗಳಿಂದ ಬೆಳೆಸಿದ ಪೇರಲ ಹಣ್ಣಿನ ಗಿಡಗಳು ಸಂಪೂರ್ಣವಾಗಿ ಜಲಾವೃತವಾಗಿವೆ. ಜೊತೆಗೆ, ತೆಂಗು, ಗೋವಿನ ಜೋಳ, ಕಬ್ಬು ಸೇರಿದಂತೆ ಹಲವು ಬೆಳೆಗಳು ಮಲಪ್ರಭಾ ನದಿಯ ಪಾಲಾಗಿವೆ ಎಂದು ಕೊಣ್ಣೂರು ಗ್ರಾಮಸ್ಥರು ತಮ್ಮ ಅಹವಾಲನ್ನು ಸಚಿವರಲ್ಲಿ ತೋಡಿಕೊಂಡರು.

ಲಕಮಾಪುರದ ಜಲಾವೃತವಾದ ಮನೆಯ ಕುಟುಂಬಸ್ಥರಿಗೆ ಅಗತ್ಯ ದಿನಸಿ ಕಿಟ್‌ಗಳನ್ನು ಸಚಿವ ಡಾ. ಎಚ್. ಕೆ. ಪಾಟೀಲ ಇದೇ ಸಂದರ್ಭದಲ್ಲಿ ವಿತರಿಸಿದರು. ವಾಸನದಲ್ಲಿ ಇರುವ 550 ಖಾತೆದಾರರ ಪೈಕಿ 350 ಖಾತೆದಾರರಿಗೆ ಬೆಳೆ ವಿಮೆ ಹಾಗೂ ಪರಿಹಾರ ಬಂದಿದ್ದು, ಸರಿಯಾಗಿ ಸಮೀಕ್ಷೆ ಪರಿಹಾರ ವಿತರಣೆ ಆಗಿಲ್ಲ ಎಂದು ಗ್ರಾಮದ ರೈತರು ಸಚಿವರಲ್ಲಿ ತಮ್ಮ ಅಹವಾಲು ಸಲ್ಲಿಸಿದರು. ಇದಕ್ಕೆ ಪ್ರತಿಯಾಗಿ ಸಚಿವರು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಕೂಡಲೇ ಸಮಸ್ಯೆಗೆ ಪರಿಹಾರ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಬಿ.ಆರ್. ಯಾವಗಲ್, ಜಿ.ಪಂ ಮಾಜಿ ಅಧ್ಯಕ್ಷರಾದ ರಾಜುಗೌಡ, ಸಿದ್ದು ಪಾಟೀಲ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಉಪವಿಭಾಗಾಧಿಕಾರಿ ಗಂಗಪ್ಪ ಎಂ ಸೇರಿದಂತೆ ಜಿಲ್ಲಾ, ತಾಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.



## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಆಗಸ್ಟ್ 4ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ

ವಾರ್ಡ್ ನಂ. 22 ವಿಜಯನಗರ ಶಾಲೆ, ಕಮತರ ಲೇಔಟ್, ಹನುಮಂತ ದೇವರ ಗುಡಿ ಲೈನ್, ವಾಲ್ಮೀಕಿ ಭವನ, ಶಿವಪ್ಪರ ಲೈನ್, ಟವರ್ ಕಂಬ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 35 ರಾಮನಗರ, ಸೇವಾಲಾಲ್ ನಗರ, ಬಾಲಾಜಿ ನಗರ, ಬಾಪೂಜಿ ನಗರ, ಆದರ್ಶ ನಗರ, 9 ನಂ ಶಾಲೆ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 11, 12 ಮಾರುತಿ ಗುಡಿ, ಪಿ ಆಂಡ್ ಟಿ ಕ್ವಾರ್ಟರ್ಸ್, ಕರಿಯಮ್ಮ ಕಲ್ಲು, ಇರಾನಿ ಕಾಲೋನಿ, ಗಣೇಶನ ಕಟ್ಟಿ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 28 ಪಂಚಾಕ್ಷರಿ ನಗರ 6, 4ನೇ ಕ್ರಾಸ್, ವಾರ್ಡ್ ನಂ. 21, 23, 20, 25, 19 ಕೆರಕಲಮಟ್ಟಿ, ಸಿ ಟಿ ಹಾಲ ಭಾಗ –1,2, ಹನುಮಾನ ಗರಡಿ, ಪಲ್ಲೇದರ ಲೈನ್, ಕಲಬಂಡಿಯವರ ಲೈನ್, ಹಾಳ ದಿಬ್ಬ, ಪಗಡದ ಭಾಗ –1,2, ಚಿನ್ನೂರರ ಲೈನ್, ಹುಲಿಗೆಮ್ಮ ಗುಡಿ ಲೈನ್, ಬೇವಿನಮರದಮ್ಮನ ಗುಡಿ ಲೈನ್, ಸೋಮೇಶ್ವರ ಗುಡಿ ಲೈನ್, 2 ನಂ ಶಾಲೆ ಎಸ್ ಟಿ ಡಿ, ಖಾನತೋಟ ಕೆಲವು ಉಳಿದ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಐಪಿಎಸ್ಸಿ ಯೋಗ ಟೂರ್ನಾಮೆಂಟ್‌ನಲ್ಲಿ ಮಾರನಬಸರಿ ಕುವರಿಯ ಸಾಧನೆ

# ರಾಷ್ಟ್ರಮಟ್ಟದಲ್ಲಿ ಮಿಂಚಿದ ಸುಶ್ಮಿತಾ ಮಾರನಬಸರಿ

■ ವಿಜಯಸಾಕ್ಷಿ ಸುದ್ದಿ, ರೋಣ

ಮಾರನಬಸರಿ ಗ್ರಾಮದ ಸುಶ್ಮಿತಾ ಚಂದ್ರಕಾಂತ ಮಾರನಬಸರಿ ಮಧ್ಯಪ್ರದೇಶದ ಇಂಧೋರ್‌ನಲ್ಲಿ ಜರುಗಿದ ಐಪಿಎಸ್ಸಿ ಯೋಗ ಟೂರ್ನಾಮೆಂಟ್‌ನಲ್ಲಿ ಭಾಗವಹಿಸಿ ಎರಡು ಬೆಳ್ಳಿ ಪದಕಗಳನ್ನು ಬಾಚಿಕೊಳ್ಳುವ ಮೂಲಕ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿರುವುದು ಗ್ರಾಮಸ್ಥರಲ್ಲಿ ಹರ್ಷ ಮೂಡಿಸಿದೆ.

ವಿದ್ಯಾರ್ಥಿನಿ ಸುಶ್ಮಿತಾ ಇಂಧೋರ್‌ನಲ್ಲಿ ನಡೆಯುತ್ತಿರುವ ಐಪಿಎಸ್ಸಿ ಯೋಗ ಟೂರ್ನಾಮೆಂಟ್‌ನಲ್ಲಿ ರಾಜ್ಯದ ಪ್ರತಿನಿಧಿಯಾಗಿ ಭಾಗವಹಿಸಿ ಗ್ರೂಪ್ ಯೋಗದಲ್ಲಿ ಬೆಳ್ಳಿ ಪದಕ ಹಾಗೂ ವಯಕ್ತಿಕ ರಿದಮಿಕ್ ಯೋಗದಲ್ಲಿ ಬೆಳ್ಳಿ ಪದಕ ಪಡೆಯುವ ಮೂಲಕ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿರುವುದು ಗ್ರಾಮದ ಕೀರ್ತಿಯನ್ನು ಇಮ್ಮಡಿಗೊಳಿಸಿದೆ.

ಈ ಬಗ್ಗೆ ಗ್ರಾ.ಪಂ ಅಧ್ಯಕ್ಷ ವೀರಣ್ಣ ಮರಡಿ ಮಾತನಾಡಿ, ಸುಶ್ಮಿತಾ ಸಾಧನೆ ಗ್ರಾಮದ ಕೀರ್ತಿಯನ್ನು ರಾಷ್ಟ್ರ ಮಟ್ಟದಲ್ಲಿ ಹೆಚ್ಚುವಂತೆ ಮಾಡಿದ್ದು ನಮಗೆಲ್ಲ ಹೆಮ್ಮೆ ಮೂಡಿಸಿದೆ. ವಿದ್ಯಾರ್ಥಿನಿಯ ಸಾಧನೆಯು ನಮ್ಮೂರಿನ ಇತರ ವಿದ್ಯಾರ್ಥಿಗಳಿಗೂ ಮಾದರಿಯಾಗಬೇಕು. ಅಕ್ಷರ ಜ್ಞಾನದ ಜೊತೆಗೆ ಕ್ರೀಡಾ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು ಎಂದರು.





ಸಾಧಕಿ ಸುಶ್ಮಿತ ಅವರ ತಂದೆ ಚಂದ್ರಕಾಂತ ಮಾರನಬಸರಿ ಮಾತನಾಡಿ, ಮಗಳ ಸಾಧನೆ ನನಗೆ ಸಂತಸ ತಂದಿದೆ. ನಮ್ಮೂರಿನ ಎಲ್ಲ ಮಕ್ಕಳು ಶೈಕ್ಷಣಿಕ, ಕ್ರೀಡೆ, ಯೋಗ ಸೇರಿದಂತೆ ಸಮಾಜಮುಖಿ ಕಾರ್ಯಗಳಲ್ಲಿ ಭಾಗವಹಿಸಿ ಗ್ರಾಮದ ಮತ್ತು ತಾವು ಕಲಿತ ಶಾಲೆಯ ಕೀರ್ತಿಯನ್ನು ಹೆಚ್ಚಿಸುವತ್ತ ಗಮಹರಿಸಬೇಕು. ಸಮಯ ವ್ಯರ್ಥ ಮಾಡದೆ ಅಕ್ಷರ ಜ್ಞಾನಕ್ಕೆ ಮಹತ್ವ ನಿಡಬೇಕು ಎಂದರು.

> ನನ್ನ ಮಗಳ ಸಾಧನೆ ಬರಿಯ ಕುಟುಂಬದ ಕೀರ್ತಿಯನ್ನಷ್ಟೇ ಹೆಚ್ಚಿಸಿಲ್ಲ. ಇಡೀ ಊರಿನ ಕೀರ್ತಿಯನ್ನು ಹೆಚ್ಚಿಸಿದೆ. ಅವಳ ಈ ಸಾಧನೆ ನಮ್ಮೂರಿನ ಮಕ್ಕಳಿಗೆ ಮಾರ್ಗದರ್ಶನವಾಗಲಿ. ಗ್ರಾಮದ ಪ್ರತಿ ಕುಟುಂಬದ ಮಕ್ಕಳು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಮಿಂಚಿ ತಂದೆ–ತಾಯಿಗಳ ಹೆಸರನ್ನು ಕೊಂಡಾಡುವಂತೆ ಮಾಡಲಿ.
>
> – ಲಲಿತಾ ಮಾರನಬಸರಿ.
> ಸಾಧಕಿ ಸುಶ್ಮಿತಾಳ ತಾಯಿ.

ಈ ಸಂದರ್ಭದಲ್ಲಿ ಗ್ರಾಮಸ್ಥರು ಪರಸ್ಪರ ಖುಷಿ ಹಂಚಿಕೊಳ್ಳುವ ಮೂಲಕ ವಿದ್ಯಾರ್ಥಿನಿಯ ಸಾಧನೆಯನ್ನು ಕೊಂಡಾಡಿದರು.

## ‘ವ್ಯಸನಮುಕ್ತ ದಿನಾಚರಣೆ’ ಉಪನ್ಯಾಸ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ರವಿವಾರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1604ನೇ ಶರಣ ಸಂಗಮದಲ್ಲಿ ಚಿತ್ರರಗಿಯ ವಿಜಯಮಹಾಂತೇಶ್ವರ ಸಂಸ್ಥಾನಮಠ, ಇಳಕಲ್ಲದ ಮಹಾಂತ ಜೋಳಿಗೆಯ ಹರಿಕಾರ ಪೂಜ್ಯ ಲಿಂ. ಡಾ. ಮಹಾಂತ ಮಹಾಸ್ವಾಮಿಗಳ 94ನೇ ಜನ್ಮದಿನದ ಅಂಗವಾಗಿ ‘ವ್ಯಸನಮುಕ್ತ ದಿನಾಚರಣೆ’ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಗದಗ–ಬೆಟಗೇರಿಯ ಬಸವದಳದ ಅಧ್ಯಕ್ಷ, ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದ ಕನ್ನಡ ಉಪನ್ಯಾಕಿ ಡಾ. ಗಿರಿಜಾ ಹಸಬಿ ಉಪನ್ಯಾಸ ಮಾಡುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲು ಮನವಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಿಂದುಳಿದ ವರ್ಗದ ನಾಯಕ, ರಾಜ್ಯದ ಮುಖ್ಯಮಂತ್ರಿ ಸಿ.ಎಂ. ಸಿದ್ದರಾಮಯ್ಯನವರ ವಿರುದ್ಧ ಷಡ್ಯಂತ್ರ ರೂಪಿಸುತ್ತಿರುವ ಬಿಜೆಪಿ–ಜೆಡಿಎಸ್ ಹಾಗೂ ಬಿಜೆಪಿ ಕೈಗೊಂಬೆಯಾಗಿ ವರ್ತಿಸುತ್ತಿರುವ ರಾಜ್ಯಪಾಲರ ವಿರುದ್ಧ ಗದಗ ಜಿಲ್ಲಾ ಕುರುಬರ ಸಂಘದ ವತಿಯಿಂದ ಆ.5ರಂದು ಬೆಳಿಗ್ಗೆ 11 ಗಂಟೆಗೆ ಕಪ್ಪು ಬಟ್ಟೆ ಧರಿಸಿ ಮೌನ ಪ್ರತಿಭಟನೆಯನ್ನು ಗದಗ ಟಿಪ್ಪು ವೃತ್ತದಿಂದ ಜಿಲ್ಲಾಡಳಿತ ಭವನದವರೆಗೆ ಹಮ್ಮಿಕೊಂಡಿದ್ದು, ಸಿದ್ದರಾಮಯ್ಯನವರ ಮೇಲೆ ನಡೆಸುತ್ತಿರುವ ಕುತಂತ್ರದ ವಿರುದ್ಧ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಿದ್ದಾರೆ.

ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪ್ರತಿಭಟನೆಯನ್ನು ಯಶಸ್ವಿಗೊಳಿಸಬೇಕೆಂದು ಲಕ್ಷ್ಮೇಶ್ವರ ತಾಲೂಕಾ ಕುರುಬರ ಸಂಘದ ಅಧ್ಯಕ್ಷ ಶೇಖಣ್ಣ ಕಾಳೆ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

### ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕಾಲೇಜಿಗೆ ರುದ್ರಪ್ಪ ಪಟ್ಟಣಶೆಟ್ಟಿ ದೇಹದಾನ

# ಸಾವಿನಲ್ಲೂ ಮಾದರಿಯಾದ ಕುಟುಂಬ



■ ವಿಜಯಸಾಕ್ಷಿ ಸುದ್ದಿ, ಗದಗ

ಮುಳಗುಂದ ರಸ್ತೆ (ಆಚಾರ್ಯ ಆಸ್ಪತ್ರೆ ಹಿಂದೆ) ಪ್ರದೇಶದ ನಿವಾಸಿ, ಗಣ್ಯ ವ್ಯಾಪಾರಸ್ಥರಾಗಿದ್ದ ಶತಾಯುಷಿ ರುದ್ರಪ್ಪ ರೇವಣಪ್ಪ ಪಟ್ಟಣಶೆಟ್ಟಿ (104 ವರ್ಷ) ಆಗಸ್ಟ್ 1ರಂದು ನಿಧನರಾದರು. ಮೂವರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗವನ್ನು ಬಿಟ್ಟು ಅಗಲಿದರು.

ರುದ್ರಪ್ಪ ರೇವಣಪ್ಪ ಪ'ಟ್ಟಣಶ'ಟ್ಟಿಂು'ು ವ'ರ' ಕುಟುಂಬದವರು, ಅವರ ಕಣ್ಣು ಮತ್ತು ದೇಹವನ್ನು ದಾನ ಮಾಡಬೇಕೆಂಬ ಆಸೆಯಿಂದ ದೇಹದಾನಕ್ಕಾಗಿ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ದೇಹದಾನ ಸಂಘ, ಅಂಗರಚನಾ ಶಾಸ್ತ್ರ ವಿಭಾಗವನ್ನು ಸಂಪರ್ಕಿಸಿದರು. ಮೃತರ ಕಣ್ಣುಗಳನ್ನು ಹುಬ್ಬಳ್ಳಿಯ ಡಾ. ಎಂ.ಎಂ. ಜೋಷಿ ನೇತ್ರಾಲಯಕ್ಕೆ ದಾನ ಮಾಡಿದ ನಂತರ, ಪಟ್ಟಣಶೆಟ್ಟಿ ಕುಟುಂಬದವರು ತಮ್ಮ ತಂದೆಯ ದೇಹವನ್ನು ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ದಾನ ಮಾಡಿ ಮಾದರಿಯಾಗಿದ್ದಾರೆ.

ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನೆಯ ಉದ್ದೇಶಕ್ಕಾಗಿ ತಮ್ಮ ತಂದೆಯ ದೇಹವನ್ನು ದಾನ ಮಾಡಿ ಸಮಾಜಕ್ಕೆ ಮಾದರಿಯಾದ ಕುಟುಂಬದ ಸದಸ್ಯರಿಗೆ ನಿರ್ದೇಶಕರಾದ ಡಾ. ಬಸವರಾಜ ಬೊಮ್ಮನಹಳ್ಳಿ, ಪ್ರಾಂಶುಪಾಲರಾದ ಡಾ. ರಾಜು ಜಿ.ಎಮ್, ವೈದ್ಯಕೀಯ ಅಧೀಕ್ಷಕರಾದ ಡಾ. ರೇಖಾ ಸೊನಾವಾನೆ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಬಿ.ಸಿ. ಕರಿಗೌಡರ್ ಹಾಗೂ ಅಂಗರಚನಾ ಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಪಿ.ಎಸ್. ಭೂಸರಡ್ಡಿಯವರು ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ.

ಸಮಾಜವು ಈ ಉದಾಹರಣೆಯನ್ನು ಅನುಸರಿಸಿ, ದೇಹವನ್ನು ಮಣ್ಣು ಮಾಡದೇ, ಸುಡದೇ ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನೆಯ ಉದಾತ್ತ ಉದ್ದೇಶಕ್ಕಾಗಿ ದಾನ ಮಾಡಲು ಮುಂದಾಗಬೇಕೆಂದು ದೇಹದಾನ ಸಂಘ, ಅಂಗರಚನಾಶಾಸ್ತ್ರ ವಿಭಾಗ, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕಾರ್ಯದರ್ಶಿಯಾದ ಡಾ. ಪ್ರತೀಕ ಖೋನಾ ಮನವಿ ಮಾಡಿದ್ದಾರೆ.

## ಶಿಕ್ಷಣ ಕ್ಷೇತ್ರದಲ್ಲಿ ದಾನಿಗಳ ಪಾತ್ರ ಮಹತ್ವದ್ದು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರಕಾರಿ ಶಾಲೆಗಳಲ್ಲಿ ಸಾಕಷ್ಟು ಬಡ ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿರುತ್ತಾರೆ. ಅವರೂ ಎಲ್ಲ ಮಕ್ಕಳಂತೆ ಕಲಿಯುವ ಹಂಬಲ ಹೊಂದಿದ್ದು, ಅವರಿಗೆ ಇರುವ ಅಗತ್ಯತೆಗಳನ್ನು ಸಮಾಜದಲ್ಲಿ ದಾನಿಗಳು ಸೇವಾ ಮನೋಭಾವನೆಯಿಂದ ನೀಡುತ್ತಿದ್ದಾರೆ. ಶಿಕ್ಷಣದಲ್ಲಿ ದಾನಿಗಳ ಪಾತ್ರ ಮಹತ್ವದ್ದಾಗಿರುತ್ತದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎನ್.ಎಚ್. ನಾಯಕ್ ಹೇಳಿದರು.ಅವರು ಶನಿವಾರ ಪಟ್ಟಣದ ಸ.ಹಿ.ಪ್ರಾ.ಶಾಲೆ.ನಂ.2ರಲ್ಲಿ 260 ಮಕ್ಕಳಿಗೆ ಟೆಕ್ಸಾಸ್ ಇನ್ಸ್ಟ್ರುಮೆಂಟ್ಸ ಬೆಂಗಳೂರು ಇವರಿಂದ ಕೊಡಮಾಡಿದ ಒಟ್ಟು 1,51,000 ರೂಪಾಯಿಗಳ ಮೌಲ್ಯದ ಬ್ಯಾಗ್ ಹಾಗೂ ಕಲಿಕಾ ಕಿಟ್ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು. ಇಂದಿನ ದಿನಗಳಲ್ಲಿ ಮಕ್ಕಳ ಗುಣಮಟ್ಟದ ಕಲಿಕೆಗಾಗಿ ಸಮುದಾಯದ ಸಹಕಾರ ಅಗತ್ಯ. ಅದರಲ್ಲೂ ಕಲಿಕಾ ಸಾಮಗ್ರಿಗಳ ಪೂರೈಕೆಯಲ್ಲಿ ಹಲವಾರು ಕಂಪನಿಗಳು ಇತ್ತೀಚಿನ ದಿನಗಳಲ್ಲಿ ಸಹಕಾರ ನೀಡುತ್ತಿದ್ದಾರೆ.

ಈ ನಿಟ್ಟಿನಲ್ಲಿ ಟೆಕ್ಸಾಸ್ ಕಂಪನಿಯ ಇಂತಹ ಕಾರ್ಯ ಆದರಣೀಯ ಎಂದರು. ಸಮಾರಂಭದಲ್ಲಿ ಟೆಕ್ಸಾಸ್ ಸಂಸ್ಥೆಯ ಶಿವಂ, ಶುಭಂ, ಸಂಜೀವ ಪಲ್ಲೇದ, ಡಯಟ್ ಗದಗನ ಉಪನ್ಯಾಸಕ ಎಚ್.ಬಿ. ರಡ್ಡೇರ, ಇ.ಸಿ.ಓ ಉಮೇಶ ಹುಚ್ಚಯ್ಯನಮಠ, ಬಿ.ಆರ್.ಪಿ. ಈಶ್ವರ ಮೆಡ್ಲೇರಿ, ಬಿ.ಎಂ. ಯರಗುಪ್ಪಿ, ಎಂ.ಎಸ್. ಹಿರೇಮಠ, ಸಿ.ಆರ್.ಪಿ.ಗಳಾದ ಉಮೇಶ ನೇಕಾರ, ಸತೀಶ ಬೋಮಲೆ, ಸಿ.ವಿ. ವಡಕಣ್ಣವರ, ಮುಖ್ಯ ಶಿಕ್ಷಕ ಬಿ.ಎಂ. ಕುಂಬಾರ, ಡಿ.ಎನ್. ದೊಡ್ಡಮನಿ, ಎಸ್.ಎಸ್. ಜೀರಂಕಳ್ಳಿ ಹಾಗೂ ಶಾಲೆಯ ಶಿಕ್ಷಕ ಬಂಧುಗಳು ಹಾಜರಿದ್ದರು.



## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ
–ಸುಭಾಷಿತ

## ಸಂಪಾದಕೀಯ

# ಜೆಡಿಎಸ್ ಮನೆಹಾಳ ನಡೆ

ರಾಜ್ಯದಲ್ಲಿ ಸುರಿಯುತ್ತಿರುವ ಮಳೆಯಿಂದಾಗಿ ಜನ ಸಂಕಷ್ಟದಲ್ಲಿದ್ದಾರೆ. ಹೀಗಾಗಿ ತಾತ್ಕಾಲಿಕವಾಗಿ ಸಿದ್ದರಾಮಯ್ಯ ವಿರುದ್ಧ ಬೆಂಗಳೂರಿನಿಂದ ಮೈಸೂರುವರೆಗೆ ಪಾದಯಾತ್ರೆ ನಡೆಸುವುದು ಬೇಡ ಎಂದಿದ್ದ ಜೆಡಿಎಸ್ ನಡೆಯ ಹಿಂದೆ ಮನೆಹಾಳ ಐಡಿಯಾ ಇರುವುದು ಈಗ ಬಹಿರಂಗಗೊಂಡಿದೆ.

ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಹಣಿಯುವ ಉದ್ದೇಶದಿಂದ ಬಿಜೆಪಿ ಬೆಂಗಳೂರಿನಿಂದ ಮೈಸೂರು ವರೆಗೆ ಪಾದಯಾತ್ರೆ ನಡೆಸಲು ಉದ್ದೇಶಿಸಿತು. ಮೈತ್ರಿ ಪಕ್ಷ ಜೆಡಿಎಸ್ ಜೊತೆಗೂ ಸಭೆ ನಡೆಸಿತು.

ಈ ವೇಳೆ ಜೆಡಿಎಸ್ ನಾಯಕರು ಪಾದಯಾತ್ರೆ ನಡೆಸುವುದು ಸೂಕ್ತವಲ್ಲ. ಮಳೆಯಿಂದಾಗಿ ಗುಡ್ಡ ಕುಸಿದು ಜನ ಸಂಕಷ್ಟದಲ್ಲಿರುವಾಗ, ಪಾದಯಾತ್ರೆ ನಡೆಸುವುದು ಜನಪ್ರತಿನಿಧಿಗಳಿಗೆ ಶೋಭೆ ತರುವುದಿಲ್ಲ ಎನ್ನುವ ಜನಪದ ಮಾತುಗಳನ್ನ ಆಡಿತ್ತು.

ಜೆಡಿಎಸ್ ನ ಈ ನಿಲುವಿನಿಂದ ಅಸಮಾಧಾನ ಗೊಂಡ ಬಿಜೆಪಿ, ಏಕಾಂಗಿಯಾದರೂ ಪಾದಯಾತ್ರೆ ನಡೆಸುವಂತೆ ಹೈಕಮಾಂಡ್ ಸೂಚನೆ ನೀಡಿತು.

ಇದರಿಂದಾಗಿ ಮೈತ್ರಿ ಪಕ್ಷದಲ್ಲಿ ಬಿರುಕು ಮೂಡುವ ಲಕ್ಷಣಗಳು ಕಾಣಿಸಿಕೊಂಡಿದ್ದವು. ಜೆಡಿಎಸ್ ರಾಜ್ಯಾಧ್ಯಕ್ಷ ಕುಮಾರಸ್ವಾಮಿ ಸಹ ಪಾದಯಾತ್ರೆ ಬಗ್ಗೆ ಅಸಮಾಧಾನ ಹೊರಹಾಕಿದ್ದರು.

ಆದರೆ ಇವತ್ತು ಪಾದಯಾತ್ರೆಯ ನೇತೃತ್ವವನ್ನೆ ವಹಿಸಿಕೊಂಡಿರುವ ರೀತಿಯಲ್ಲಿ ಜೆಡಿಎಸ್ ನಾಯಕರು ಸಿದ್ದರಾಮಯ್ಯ ವಿರುದ್ಧ ಅಬ್ಬರಿಸಿದ್ದಾರೆ.

ಮಳೆಯಿಂದ ಜನ ಸಂಕಷ್ಟದಲ್ಲಿರುವುದನ್ನು ಯಾಕೆ ಮರೆತರು ಎನ್ನುವುದಕ್ಕೆ ಉತ್ತರವೇ ಪ್ರೀತಮ್ ಗೌಡ.

ತಮ್ಮ ಕುಟುಂಬದ ಕುಡಿ ವಿರುದ್ಧ ತೊಡೆತಟ್ಟಿದ್ದ ಪ್ರೀತಮ್ ಗೌಡ ಅವರನ್ನ ಹಣೆಯಲು ಜೆಡಿಎಸ್ ಬಿಜೆಪಿ ಮೇಲೆ ಈ ರೀತಿಯ ಒತ್ತಡ ತಂತ್ರವನ್ನ ಅನುಸರಿಸಿತು. ಸದ್ಯಕ್ಕೆ ಮೈತ್ರಿ ಅನಿವಾರ್ಯ ಆಗಿರುವುದರಿಂದ ಬಿಜೆಪಿ ನಾಯಕರು ಸಹ ಜೆಡಿಎಸ್ ಒತ್ತಡಕ್ಕೆ ಮಣಿಯಬೇಕಾಯಿತು.

ಹೀಗೆ ಜೆಡಿಎಸ್ ವಿರುದ್ಧ ತೊಡೆ ತಟ್ಟಿದವರನ್ನು ಮೂಲೆಗುಂಪು ಮಾಡುವಂತಹ ಜೆಡಿಎಸ್‌ನ ಸಂಸ್ಕೃತಿ ಮತ್ತೊಮ್ಮೆ ಅನಾವರಣಗೊಂಡಿದೆ.

ಇದು ಜೆಡಿಎಸ್‌ನ ಮತ್ತೊಂದು ಮನೆಹಾಳು ಐಡಿಯಾ ಅಷ್ಟೇ.

---

### ಸಿಎಂ ಸಿದ್ದರಾಮಯ್ಯ ವಿರುದ್ಧ ವಿರೋಧ ಪಕ್ಷಗಳ ಷಡ್ಯಂತ್ರ: ಫಕ್ಕೀರಪ್ಪ ಹೆಬಸೂರ

# ಕುರುಬರ ಸಂಘದಿಂದ ಮೌನ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅಹಿಂದ ನಾಯಕ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಷಡ್ಯಂತ್ರ ರೂಪಿಸುತ್ತಿರುವ ಬಿಜೆಪಿ ಹಾಗೂ ಜೆಡಿಎಸ್ ನಾಯಕರು ವಿರುದ್ಧ ಕರ್ನಾಟಕ ಪ್ರದೇಶದ ಕುರುಬರ ಸಂಘದ ಜಿಲ್ಲಾ ಘಟಕದ ವತಿಯಿಂದ ಇದೇ ಆಗಸ್ಟ್ 5ರಂದು ನಗರದ ಟಿಪ್ಪು ಸುಲ್ತಾನ್ ಸರ್ಕಲ್‌ನಿಂದ ಜಿಲ್ಲಾಡಳಿತ ಕಚೇರಿವರೆಗೆ ಮೌನ ಪ್ರತಿಭಟನೆ ನಡೆಸಿ, ಮನವಿ ಸಲ್ಲಿಸಲಾಗವದು ಎಂದು ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕ್ಕಿರಪ್ಪ ಹೆಬಸೂರ ಹೇಳಿದರು.




ನಗರದ ಪತ್ರಿಕಾ ಭವನದಲ್ಲಿ ಶನಿವಾರ ಕರೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ಸುಮಾರು 45 ವರ್ಷಗಳಿಂದ ಕಪ್ಪುಚುಕ್ಕಿ ಇಲ್ಲದೆ ರಾಜಕಾರಣ ಮಾಡುತ್ತಿರುವ ಮುಖ್ಯಮಂತ್ರಿ ಸಿದ್ದಾರಾಮಯ್ಯರ ಸಾಧನೆಗಳನ್ನು ಸಹಿಸದೆ ಬಿಜೆಪಿ ಹಾಗೂ ಜೆಡಿಎಸ್‌ನವರು ತೇಜೋವಧೆ ಮಾಡುತ್ತಿದ್ದಾರೆ. ಮುಡಾ ಹಗರಣ ಹಿಡಿದು ಪ್ರತಿಭಟಿಸುತ್ತಿದ್ದಾರೆ. ಆದರೆ, ಸಿದ್ದರಾಮಯ್ಯ ಈ ಪ್ರಕರಣದಲ್ಲಿ ತಪ್ಪು ಮಾಡಿಲ್ಲ. ಬಿ.ಎಸ್. ಯಡಿಯೂರಪ್ಪ ಜೈಲಿಗೆ ಹೋಗಿ ಬಂದಿದ್ದಾರೆ. ದೇವೇಗೌಡರ ಕುಟುಂಬದ ಬಗ್ಗೆ ಇಡೀ ದೇಶಕ್ಕೆ ಗೊತ್ತಿದೆ. ಆದರೆ, ಸಿದ್ದರಾಮಯ್ಯ ಯಾವುದೇ ಹಗರಣದಲ್ಲಿ ಭಾಗಿಯಾಗಿಲ್ಲ ಎಂದು ಹೇಳಿದರು.

ಅ. 7ರಂದು ಬೆಂಗಳೂರಿನಲ್ಲಿ ಬೃಹತ್ ಸಮಾವೇಶ ಹಮ್ಮಿಕೊಂಡಿದ್ದು, ಆ ಸಭೆಯಲ್ಲಿ ಎಲ್ಲರೂ ಭಾಗವಹಿಸುತ್ತೇವೆ. ರಾಜ್ಯಪಾಲರು ಕೇಂದ್ರ ಸರ್ಕಾರದ ಕೈಗೊಂಬೆಯಾಗಿ ಕೆಲಸ ಮಾಡುತ್ತಿದ್ದಾರೆ. ಇದು ಪ್ರಜಾಪ್ರಭುತ್ವಕ್ಕೆ ಮಾರಕವಾಗಿದೆ. ಬಿಜೆಪಿಯವರು ಅಧಿಕಾರದ ಆಸೆಗಾಗಿ ಜನಪರ ಇರುವ ಸರ್ಕಾರವನ್ನು ಅಭದ್ರಗೋಳಿಸಲು ಪ್ರಯತ್ನಿಸುತ್ತಿದ್ದಾರೆ. 15 ಬಾರಿ ಬಜೆಟ್ ಮಂಡಿಸಿದ ಏಕೈಕ ಸಿಎಂ ಸಿದ್ದರಾಮಯ್ಯ ಆಗಿದ್ದಾರೆ. ಇಂತಹ ನಾಯಕನನ್ನು ಕೆಳಗಿಸಿದರೆ ಅಹಿಂದ ವರ್ಗಗಳಿಂದ ಬೀದಿಗಿಳಿದು ಹೋರಾಟ ಮಾಡಬೇಕಾಗುತ್ತದೆ ಎಂದು ಫಕ್ಕಿರಪ್ಪ ಹೆಬಸೂರ ಎಚ್ಚರಿಕೆ ನೀಡಿದರು.

ಗದಗ ತಾಲೂಕಾ ಅಧ್ಯಕ್ಷ ನಾಗಪ್ಪ ಗುಗ್ಗರಿ ಅವರು ಮಾತನಾಡಿ, ಬಿಜೆಪಿ, ಜೆಡಿಎಸ್ ಹಾಗೂ ರಾಜ್ಯಪಾಲರು ಕೇಂದ್ರದ ಕೈಗೊಂಬೆಯಾಗಿ ಕೆಲಸ ಮಾಡುತ್ತಿದ್ದಾರೆ. ಚುನಾವಣೆ ಪೂರ್ವದಲ್ಲಿ ಜನತೆಗ ನೀಡಿದ ಭರಸವೆಯಂತೆ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ಜನ ಮೆಚ್ಚುಗೆ ಗಳಿಸಿರುವುದನ್ನು ಸಹಿಸದೆ ವಿರೋಧ ಪಕ್ಷಗಳು ಕುತಂತ್ರಗಳನ್ನು ಮಾಡುತ್ತಿದ್ದಾರೆ. ಇದಕ್ಕೆ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಲಾಗುವುದು ಎಂದು ಹೇಳಿದರು.

ಜಿಲ್ಲಾ ಕಾರ್ಯದರ್ಶಿ ಶರಣಬಸಪ್ಪ ಮುದಿಯಣ್ಣನವರ ಮಾತನಾಡಿ, ಜೆಡಿಎಸ್ ಹಾಗೂ ಬಿಜೆಪಿ ನಾಯಕರು ಸಿದ್ದರಾಮಯ್ಯನವರನ್ನು ರಾಜಕೀಯವಾಗಿ ಮುಗಿಸಲು ಸಂಚು ರೂಪಿಸಿದ್ದಾರೆ. ಇಡೀ ದೇಶದಲ್ಲಿ ನರೇಂದ್ರ ಮೋದಿ ಮಾಡಿದ ತಪ್ಪುಗಳ ವಿರುದ್ಧ ರಾಹುಲ್ ಗಾಂಧಿ ನಂತರ ಗಟ್ಟಿ ದ್ವನಿಯಲ್ಲಿ ಮಾತನಾಡಿದ ನಾಯಕ ಸಿದ್ದರಾಮಯ್ಯ. ಇಂತಹ ನಾಯಕನ ವಿರುದ್ಧ ಷಡ್ಯಂತ್ರ ರೂಪಿಸಿದರೇ ಕುರುಬ ಸಮಾಜ ಸುಮ್ಮನಿರುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶೇಖಣ್ಣ ಕಾಳೆ, ಹೊನ್ನಪ್ಪ ಪೋಟಿ, ಚನ್ನಮ್ಮ ಹುಳಕಣ್ಣವರ, ರೇಖಾ ಜಡಿಯವರ, ನೀಲಪ್ಪ ಗುಡದಣ್ಣವರ, ಶರಣಪ್ಪ ಕುರಿ, ಮಂಜುನಾಥ ಜಡಿ, ಉಮೇಶ ಅರಳಿ, ಕೃಷ್ಣಗೌಡ ಪಾಟೀಲ, ಎಸ್. ಎಸ್. ಕರಡಿ, ಕೆ.ಬಿ. ಕಂಬಳಿ, ನೀಲಪ್ಪ ಪಡಗೇರಿ, ಉಮೇಶ ರೊಳ್ಳಿ, ಮಲ್ಲಪ್ಪ ಕುರಡಗಿ, ಸುರೇಶ ತಳಹಳ್ಳಿ, ಬಸವರಾಜ ಉಮ್ಮಣ್ಣವರ, ಶಿವಕುಮಾರ ಹೈತಾಪೂರ ಮುಂತಾದವರು ಉಪಸ್ಥಿತರಿದ್ದರು.

---

### ವಿಶ್ವ ಸ್ತನ್ಯ ಪಾನ ದಿನಾಚರಣೆಯಲ್ಲಿ ಮೀನಾಕ್ಷಿ ಕೆ.ಎಸ್

# ತಾಯಿ ಎದೆ ಹಾಲು ಅಮೃತಕ್ಕೆ ಸಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಯಿಯ ಎದೆ ಹಾಲು ಅಮೃತಕ್ಕೆ ಸಮಾನ ತಾಯಿಯ ಎದೆ ಹಾಲು ರೋಗ ನಿರೋಧಕ ಶಕ್ತಿಯನ್ನು ಒಳಗೊಂಡಿದೆ ಎಂದು ಜಿಲ್ಲಾ ಆರ್ ಸಿಹೆಚ್‌ಓ ಅಧಿಕಾರಿ ಡಾ. ಮೀನಾಕ್ಷಿ ಕೆ.ಎಸ್ ಹೇಳಿದರು.

ನಗರದ ದಂಡಪ್ಪ ಮಾನ್ವಿ ಹೆರಿಗೆ ಆಸ್ಪತ್ರೆಯಲ್ಲಿ ಗುರುವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಐಎಪಿ ಇವರ ಸಹಯೋಗದೊಂದಿಗೆ ಗರ್ಭಿಣಿ, ಬಾಣಂತಿಯರಿಗೆ ಸ್ತನ್ಯ ಪಾನದ ಮಹತ್ವದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.



ತಾಯಿಯ ಎದೆ ಹಾಲು ಅಮೃತಕ್ಕೆ ಸಮಾನ, ತಾಯಿಯ ಎದೆ ಹಾಲಿನಲ್ಲಿರುವ ರೋಗ ನಿರೋಧಕ ಶಕ್ತಿಯು ಮಗುವಿನ ಸಂಪೂರ್ಣ ಬೆಳವಣಿಗೆಗೆ ಸಹಾಯಕಾರಿ, ಕಾಂಗರೂ ವಿಧಾನವನ್ನು ಅನುಸರಿಸಿ ತಾಯಿ ಮಗುವನ್ನು ರಕ್ಷಣೆ ಮಾಡಬೇಕು. ತಾಯಿಯ ಎದೆ ಹಾಲು ಮಗುವಿನ ಬೆಳವಣಿಗೆಗೆ ಹೆಚ್ಚು ಶಕ್ತಿದಾಯಕ ಮತ್ತು ಹೆಚ್ಚು ಪರಿಣಾಮಕಾರಿ ಮತ್ತು ಪ್ರತಿಯೊಬ್ಬ ಹಾಲುಣಿಸುವ ತಾಯಂದಿರು ಮಗುವಿಗೆ ತನ್ನ ಮೊದಲನೆ ಹಾಲನ್ನು ಮಗುವಿಗೆ ಕುಡಿಸುತ್ತೇನೆ ಎಂದು ಮಾನಸಿಕವಾಗಿ ಸದ್ರಡರಾಗಿರಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸ್ತನ್ಯ ಪಾನವನ್ನು ಬೆಂಬಲಿಸುವ ಪ್ರತಿಜ್ಞಾ ವಿಧಿಯನ್ನು ಮಾಡಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಮ್ಸ್ ಚಿಕ್ಕ ಮಕ್ಕಳ ತಜ್ಞ ಡಾ. ಈರಣ್ಣ ಹಳೇಮನಿ, ಡಾ.ಪ್ರೀತ ಕೋನ, ಆಶಾ ಕಾರ್ಯಕರ್ತೆಯರು ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

---

# ರಾಮನಗರ ಜಿಲ್ಲೆಯ ಹೆಸರು ಬದಲಾವಣೆ ಬೇಡ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಮನಗರ ಜಿಲ್ಲೆಯ ಹೆಸರು ಬದಲಾವಣೆ ಮಾಡುತ್ತಿರುವ ರಾಜ್ಯ ಸರ್ಕಾರದ ತೀರ್ಮಾನವನ್ನು ವಿರೋಧಿಸಿ ಶ್ರೀರಾಮ ಸೇನಾ ಗದಗ ಜಿಲ್ಲಾ ಘಟಕದ ವತಿಯಿಂದ ಮುಖ್ಯಮಂತ್ರಿಗಳಿಗೆ ಗದಗ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಯಿತು.

ರಾಜ್ಯ ಸರ್ಕಾರ ರಾಮನಗರ ಜಿಲ್ಲೆಯನ್ನು ಬೆಂಗಳೂರು ವ್ಯಾಪ್ತಿಗೆ ತೆಗೆದುಕೊಂಡು ಅಭಿವೃದ್ಧಿ ಮಾಡುವ ಬಗ್ಗೆ ಹೇಳಿದೆ. ಆದರೆ ಅಭಿವೃದ್ಧಿಯ ನೆಪದಲ್ಲಿ ಐತಿಹಾಸಿ ರಾಮನಗರ ಹೆಸರನ್ನು ಕೈಬಿಡಲು ಪ್ರಸ್ತಾಪ ಮಾಡಿದ್ದು ಖಂಡನಿಯ. ಸ್ವಾತಂತ್ರ್ಯಾನಂತರ ಕೆಂಗಲ್ ಹನುಮಂತಯ್ಯನವರು ರಾಮನಗರ ಎಂದು ನಾಮಕರಣ ಮಾಡಿ ಅಲ್ಲಿಯ ಭವ್ಯ ಪರಂಪರೆ, ಜನತೆಯ ಭಾವನಾತ್ಮಕ ವಿಷಯಕ್ಕೆ ಗೌರವ ನೀಡಿದ್ದರು. ಈಗ ಕಾಂಗ್ರೆಸ್ ಸರ್ಕಾರ ಈ ಹೆಸರನ್ನು ಬದಲಾಯಿಸುತ್ತಿರುವುದು ನಾಡಿನ ಭವ್ಯ ಪರಂಪರೆಗೆ ಬಗೆಯುವ ಅನ್ಯಾಯವಾಗಿದೆ. ಈ ಹಿನ್ನೆಲೆಯಲ್ಲಿ ಯಾರದೋ ಹಿತಾಸಕ್ತಿಗಾಗಿ ಜಿಲ್ಲೆಯ ಜನತೆಯ ಆಸೆಗೆ ವಿರುದ್ಧವಾಗಿ ಹೆಸರು ಬದಲಾವಣೆ ಮಾಡುತ್ತಿರುವುದು ಖಂಡನಿಯ ಎಂದರು.

ಈ ಸಂದರ್ಭದಲ್ಲಿ ಶ್ರೀರಾಮ ಸೇನಾ ರಾಜ್ಯ ಶಾರೀರಿಕ ಪ್ರಮುಖರಾದ ಮಹೇಶ ರೋಖಡೆ, ಜಿಲ್ಲಾಧ್ಯಕ್ಷ ಸೋಮು ಗುಡಿ, ಅಶೋಕ ಭಜಂತ್ರಿ, ಸುನೀಲ್ ಮುಳ್ಳಾಳ, ಕಿರಣ ಹಿರೇಮಠ, ಹುಲಿಗೆಪ್ಪ ವಾಲ್ಮೀಕಿ ಸೇರಿದಂತೆ ಕಾರ್ಯಕರ್ತರು ಪಾಲ್ಗೊಂಡಿದ್ದರು.

---

# ವಚನ ಶ್ರಾವಣ ಪ್ರಾರಂಭೋತ್ಸವ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ



ಬಸವದಳ, ಬಸವಕೇಂದ್ರ, ಲಿಂಗಾಯತ ಪ್ರಗತಿಶೀಲ ಸಂಘ ಗದಗ–ಬೆಟಗೇರಿ ಇವುಗಳ ಸಂಯುಕ್ತಾಶ್ರಯದಲ್ಲಿ 'ವಚನ ಶ್ರಾವಣ'ವನ್ನು ಗದಗ–ಬೆಟಗೇರಿ ನಗರದ ಹಲವಾರು ಬಡಾವಣೆಗಳಲ್ಲಿ ನಡೆಯಲಿದ್ದು, ಬೆಟಗೇರಿ ಒಕ್ಕಲಗೇರಿ ಓಣಿಯ ಶ್ರೀ ಬ್ರಹ್ಮದೇವರ ಭಜನಾ ಮಂಡಳಿ (ದೈವದ ಮನೆ)ಯಲ್ಲಿ ರವಿವಾರ ಸಂಜೆ 5.30ಕ್ಕೆ ಉದ್ಘಾಟನೆಗೊಳ್ಳಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವದಳದ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಉದ್ಘಾಟಕರಾಗಿ ಶರಣ ಕೊಟ್ರಪ್ಪ ಎಂ.ಮುಳ್ಳಾಳ, ಅತಿಥಿಗಳಾಗಿ ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ, ಶರಣ ಶೇಖಣ್ಣ ಕಳಸಾಪೂರಶೆಟ್ರ ಮತ್ತು ಬಸವಕೇಂದ್ರದ ಅಧ್ಯಕ್ಷ ಶರಣ ಕೆ.ಎಸ್. ಚೆಟ್ಟಿ, ಶರಣ ಚಂದ್ರು ಕರಿಸೋಮನಗೌಡ್ರ ಆಗಮಿಸುವರು. ಇದೇ ಸಂದರ್ಭದಲ್ಲಿ 'ವಚನ ಶ್ರಾವಣ–2024' ಕಿರು ಹೊತ್ತಿಗೆಯನ್ನು ಬಿಡುಗಡೆಗೊಳಿಸಲಾಗುವುದು. ವಚನ ಚಿಂತನೆಯನ್ನು ಕನ್ನಡ ಪ್ರಾಧ್ಯಾಪಕ ಪ್ರೊ. ಸಿದ್ಧಲಿಂಗೇಶ ಯು. ಸಜ್ಜನಶೆಟ್ಟರ ಮಾಡುವರು. ಬಸವದಳ, ಬಸವಕೇಂದ್ರ ಹಾಗೂ ಲಿಂಗಾಯತ ಪ್ರಗತಿಶೀಲ ಸಂಘ, ಗದಗ ತಾಲೂಕಾ ಶರಣ ಸಾಹಿತ್ಯ ಪರಿಷತ್ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

---

# ಹಿರಿಯರ ಆಶೀರ್ವಾದದಲ್ಲಿ ಶಕ್ತಿಯಿದೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್

ಚಿಕ್ಕವರು ಗುರು–ಹಿರಿಯರಿಗೆ ನಮಸ್ಕಾರ ಮಾಡಿದಾಗ ಅವರು ನಮ್ಮನ್ನು ಹರಸುತ್ತಾರೆ. ಹೀಗೆ ಅವರು ನೀಡುವ ಆಶೀರ್ವಾದದಲ್ಲಿ ದೊಡ್ಡ ಶಕ್ತಿ ಇದೆ. ಇದರಿಂದ ವ್ಯಕ್ತಿಗೆ ಜೀವನದಲ್ಲಿ ಉನ್ನತ ಸ್ಥಾನಗಳು ದೊರಕುತ್ತವೆ ಎಂದು ಆನಂದ ಕಾಳೆ ಹೇಳಿದರು.



ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದಿರುವ ಹನುಮಾನ ಚಾಲೀಸಾ ಪಠಣದ ಸತ್ಸಂಗ ಸಭೆಯಲ್ಲಿ ಅವರು ಮಾತನಾಡಿದರು.

ಇದೊಂದು ಸಂಸ್ಕಾರವಾಗಿದ್ದು, ಇದರಿಂದ ವ್ಯಕ್ತಿಯ ಜೀವನದಲ್ಲಿ ಬದಲಾವಣೆಗಳನ್ನು ಕಾಣಬಹುದು. ಹಿರಿಯರು ಹೇಳುವ ಮಾತುಗಳಿಗೆ ಕಿರಿಯರು ಗೌರವ ನೀಡುವುದನ್ನು ನಾವು ಶ್ರೀಕೃಷ್ಣನ ಜೀವನದಿಂದ ಕಲಿಯಬಹುದು. ಆತ ಸಾಕ್ಷಾತ್ ಭಗವಂತನಾಗಿದ್ದೂ, ಮನೆಗೆ ಬಂದ ಅತಿಥಿಗಳನ್ನು ಗೌರವಿಸುವುದು ಹೇಗೆ ಎಂಬುದನ್ನು ಆತ ತೋರಿಸಿಕೊಟ್ಟಿದ್ದಾನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವೇ. ಮೂ. ವಿಶ್ವನಾಥಭಟ್ಟ ವೈದ್ಯ, ಶೇಷಗಿರಿ ಕುಲಕರ್ಣಿ, ಬಿ.ಎಲ್. ಕುಲಕರ್ಣಿ, ಬಾಬುರಾವ ಕಾಳೆ, ನಾಗೇಶಭಟ್ಟ ಗ್ರಾಮಪುರೋಹಿತ, ನಿವೃತ್ತ ಉಪನ್ಯಾಸಕ ಎಸ್.ಎಚ್. ಕುಲಕರ್ಣಿ, ಎ.ಜಿ. ಕುಲಕರ್ಣಿ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ, ಅಜಿತ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ಡಾ. ಪ್ರದ್ಯುಮ್ನ ಕುಲಕರ್ಣಿ, ಅಜಿತ ಕುಲಕರ್ಣಿ, ಆನಂದ ಕುಲಕರ್ಣಿ, ಶಿಕ್ಷಕ ಎ.ಟಿ. ಮಳ್ಳಳ್ಳಿ, ಉಮೇಶ ಧಾರವಾಡ, ವಿಜಯಕುಮಾರ, ಡಾ. ಸಪ್ನಾ ಕಾಳೆ, ವಿಮಲಾಬಾಯಿ ಗ್ರಾಮಪುರೋಹಿತ, ಸೀಮಾ ಕೊಂಡಿ ಅನಿತಾ ಗ್ರಾಮಪುರೋಹಿತ, ಪದ್ಮಾ ಕುಲಕರ್ಣಿ,ಲಕ್ಷ್ಮಿ ಗ್ರಾಮಪುರೋಹಿತ, ಶೋಭಾ ಸೂರಭಟ್ಟನವರ, ಸನ್ಮತಿ ಸದರಜೋಷಿ, ಭಾಗ್ಯಾಬಾಯಿ ಕಾಳೆ, ಸುಮಾ ಕುಲಕರ್ಣಿ, ಮಂಗಳಾ ಕುಲಕರ್ಣಿ, ರೇಣುಕಾ ಗ್ರಾಮಪುರೋಹಿತ, ಜಯಶ್ರೀ ಗ್ರಾಮಪುರೋಹಿತ, ರೇಣುಕಾ ಗ್ರಾಮಪುರೋಹಿತ, ಪ್ರಭಾ ಕುಲಕರ್ಣಿ, ಸರೋಜಾ ನಾಡಿಗೇರ, ವಿದ್ಯಾ ಕುಲಕರ್ಣಿ, ಜಯಶ್ರೀ ಕುಲಕರ್ಣಿ, ರಾಜಶ್ರೀ ಕುಲಕರ್ಣಿ, ಜ್ಯೋತಿ ನಾಡಿಗೇರ, ಸಂಧ್ಯಾ ಕುಲಕರ್ಣಿ, ರೂಪಾ ಗ್ರಾಮಪುರೋಹಿತ, ಸುಶಿಲಾ ಪುರಾಣಿಕ ಮುಂತಾದವರು ಪಾಲ್ಗೊಂಡಿದ್ದರು.

---

# ಇನ್ನರ್‌ವ್ಹೀಲ್ ಪದಾಧಿಕಾರಿಗಳ ಪದಗ್ರಹಣ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಇನ್ನರ್‌ವ್ಹೀಲ್ ಸಂಸ್ಥೆಯ 2024–25ನೇ ಸಾಲಿನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಗುರುವಾರ ನಡೆಯಿತು.



ಸಂಸ್ಥೆಯ 2024–25ನೇ ಸಾಲಿನ ನೂತನ ಅಧ್ಯಕ್ಷೆಯಾಗಿ ರೇಖಾ ವಡಕಣ್ಣವರ, ಕಾರ್ಯದರ್ಶಿಯಾಗಿ ಮಾಲಾದೇವಿ ದಂದರಗಿ, ಖಜಾಂಚಿಯಾಗಿ ಮಂಜುಳಾ ಓದುನವರ ಮತ್ತು ಐಎಸ್‌ಓ ನಿರ್ಮಲ ಅರಳಿ ಹಾಗೂ ಎಡಿಟರ್ ಆಗಿ ಸುಲೋಚನ ಜವಾಯಿ ಪದಗ್ರಹಣ ಸ್ವೀಕರಿಸಿದರು.

ನೂತನ ಪದಾಧಿಕಾರಿಗಳು ಕಳೆದ ವರ್ಷದ ಅಧ್ಯಕ್ಷೆ ಕಾವ್ಯ ದೇಸಾಯಿ ಅವರಿಂದ ಅಧಿಕಾರ ಸ್ವೀಕರಿಸಿದರು ಮತ್ತು ಹಿಂದಿನ ಅಧ್ಯಕ್ಷೆ ಜಯಶ್ರೀ ಮೆಳ್ಳಿಗೇರಿ ಅವರು ನೂತನ ಪದಾಧಿಕಾರಿಗಳಿಗೆ ಪ್ರಮಾಣವಚನ ಬೋಧಿಸಿದರು, ಗಿರಿಜಾ ಮುದುಗಲ್ ಮತ್ತು ಡಾ. ಶೃತಿ ಹೂವಿನ್ ನೂತನ ಸದಸ್ಯರಾಗಿ ಸೇರ್ಪಡೆಯಾದರು. ಈ ಸಂದರ್ಭದಲ್ಲಿ ರೇಖಾ ವಡಕಣ್ಣವರ, ಕಾರ್ಯದಶಿ ಮಾಲಾದೇವಿ ದಂದರಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಅನ್ನಪೂರ್ಣ ಓದುನವರ, ನಂದಾ ಧರ್ಮಾಯತ್, ರತ್ನ ಕರ್ಕಿ ಉಪಸ್ಥಿತರಿದ್ದರು. ಇಂದುಮತಿ ಜಕ್ಕನಗೌಡರ ಮಂಜುಳಾ ಅಕ್ಕಿ ನಿರೂಪಿಸಿ ವಂದಿಸಿದರು.

---



ಗದುಗಿನ ಶ್ರೀ ಸಂತ ನಾಮದೇವ ಮಹಾರಾಜರ ಪುಣ್ಯತಿಥಿಯ ಪ್ರಯುಕ್ತ ಜವಳಿ ಬಜಾರದ ಭಾವಸಾರ ಕ್ಷತ್ರಿಯ ಸಮಾಜ ಶ್ರೀ ವಿಠ್ಠಲ ಮಂದಿರದಲ್ಲಿ ಪರಮಪೂಜ್ಯ ಗುರುವರ್ಯ ಶ್ರೀ ಹರಿ ಮಹಾರಾಜ್ ರಾಶಿನ್ ಕರ್ ಗುರುಜಿ ಬುವಾ ಪಡ್ ಪಂಡರಾಪುರ ಇವರಿಂದ ಗುಲಾಲ್ ಕೀರ್ತನೆ ನೆರವೇರಿತು ಎಂದು ಭಾವಸಾರ ಕ್ಷತ್ರಿಯ ಸಮಾಜದ ಗದಗ ಅಧ್ಯಕ್ಷ ಪರಶುರಾಮ್ ಮಹೇಂದ್ರಕರ್ ತಿಳಿಸಿದ್ದಾರೆ.

---

# ವಯನಾಡ್ ದುರಂತ | 350 ದಾಟಿದ ಮೃತರ ಸಂಖ್ಯೆ: ಮುಂದುವರಿದ ರಕ್ಷಣಾ ಕಾರ್ಯಾಚರಣೆ

■ ವಿಜಯಸಾಕ್ಷಿ ಸುದ್ದಿ, ವಯನಾಡ್

ಹವಾಮಾನ ವೈಪರೀತ್ಯದ ನಡುವೆಯೂ ಭೂಕುಸಿತ ದುರಂತ ಸಂಭವಿಸಿದ ವಯನಾಡ್‌ನ ಮುಂಡಕ್ಕೈ ಮತ್ತು ಚೂರಲ್ಮಲಾದಲ್ಲಿ ರಕ್ಷಣೆ ಮತ್ತು ಪರಿಹಾರ ಕಾರ್ಯಗಳು ಮುಂದುವರೆದಿದೆ.

ವರದಿಗಳ ಪ್ರಕಾರ, ರಕ್ಷಣಾ ಕಾರ್ಯಾಚರಣೆ ಕೊನೆಯ ಹಂತ ತಲುಪಿದೆ. ಆದರೆ, ಇನ್ನೂ 200ಕ್ಕೂ ಅಧಿಕ ಜನರು ನಾಪತ್ತೆಯಾಗಿದ್ದಾರೆ ಎನ್ನಲಾಗಿದ್ದು, ಹಾಗಾಗಿ ಅವರ ಹುಡುಕಾಟದ ಬಗ್ಗೆ ಮುಂದಿನ ತೀರ್ಮಾನ ತೆಗೆದುಕೊಳ್ಳಬೇಕಿದೆ.

ಅನೇಕ ವರದಿಗಳ ಪ್ರಕಾರ, ದುರಂತದಲ್ಲಿ ಮೃತಪಟ್ಟವರ ಸಂಖ್ಯೆ 350 (358) ದಾಟಿದೆ. ನಾಪತ್ತೆಯಾದವರಲ್ಲಿ ಮೃತರ ದೇಹಗಳು ಮತ್ತು ಬದುಕುಳಿದವರ ಹುಡುಕಾಟಕ್ಕೆ ರಕ್ಷಣಾ ತಂಡಗಳು ಅತ್ಯಾಧುನಿಕ ಉಪಕರಣಗಳು ಮತ್ತು ಶ್ವಾನಗಳನ್ನು ಬಳಸಿಕೊಂಡಿದೆ.

ಇದುವರೆಗೆ ಪತ್ತೆಯಾದ ಮೃತದೇಹಗಳ ಪೈಕಿ 341ರ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ ಮತ್ತು 146 ಮೃತದೇಹಗಳ ಗುರುತು ಪತ್ತೆ ಹಚ್ಚಲಾಗಿದೆ.

ಜಿಪಿಎಸ್, ಡ್ರೋನ್ ಮತ್ತು ಮೊಬೈಲ್ ನೆಟ್‌ವರ್ಕ್ ಲೊಕೇಶನ್ ಮೂಲಕ ದುರಂತ ನಡೆಯುವ ಮುನ್ನ ಕೊನೆಯ ಬಾರಿ ಜನರು ಎಲ್ಲಿದ್ದರು ಎಂದು ಪತ್ತೆ ಹಚ್ಚಲಾಗುತ್ತಿದೆ. ಭಾರತೀಯ ಸೇನೆ ನಿರ್ಮಿಸಿದ 190 ಮೀಟರ್ ಉದ್ದದ ಬೈಲಿ ಸೇತುವೆ ಯಂತ್ರಗಳ ಸಾಗಣೆ ಸೇರಿದಂತೆ ಇತರ ರೀತಿಯಲ್ಲಿ ರಕ್ಷಣಾ ಕಾರ್ಯಕ್ಕೆ ದೊಡ್ಡ ಸಹಕಾರಿಯಾಗಿದೆ.



---

# ಮಣಿಪುರ : ಶಾಂತಿ ಮಾತುಕತೆಯ ಬೆನ್ನಲ್ಲೇ ಮತ್ತೆ ಹಿಂಸಾಚಾರ

■ ವಿಜಯಸಾಕ್ಷಿ ಸುದ್ದಿ, ಮಣಿಪುರ

ಮಣಿಪುರದ ಜಿರಿಬಾಮ್‌ನಲ್ಲಿ ಶಾಂತಿ ಮರುಸ್ಥಾಪನೆಗೆ ಮೈತೆಯಿ–ಹ್ಮಾರ್ ಸಮುದಾಯಗಳು ಒಪ್ಪಿಗೆ ಸೂಚಿಸಿ 24 ಗಂಟೆ ಕಳೆಯುವುದೊರೊಳಗೆ ಮತ್ತೆಯ ಹಿಂಸಾಚಾರ ಭುಗಿಲೆದ್ದಿದೆ.

ಸೆಜಾಂಗ್ ಎಂಬ ಕುಕಿ ಹಳ್ಳಿಯ ಸಮೀಪವಿರುವ ಬೆಂಗಾಲಿ ಬಹುಸಂಖ್ಯಾತ ಪ್ರದೇಶವಾದ ಜಿರಿಬಾಮ್‌ನ ಲಾಲ್ಪಾನಿಯಲ್ಲಿ ಮೈತೆಯಿ ಕುಟುಂಬದ ಮನೆಗೆ ಬೆಂಕಿ ಹಚ್ಚಲಾಗಿದೆ.

"ಲಾಲ್ಪಾನಿ ಮೈತೆಯಿ ಸಮುದಾಯದ ನಿವಾಸಿಗಳು ವಾಸಿಸುತ್ತಿದ್ದ ಮನೆಗಳಿದ್ದ ಕಾಲನಿಯಾಗಿದ್ದು, ಜಿಲ್ಲೆಯಲ್ಲಿ ಹಿಂಸಾಚಾರ ಸ್ಫೋಟಗೊಂಡ ನಂತರ, ಬಹುತೇಕ ಮಂದಿ ತಮ್ಮ ಮನೆಗಳನ್ನು ತೊರೆದು ಹೋಗಿದ್ದರು. ಈ ಪ್ರದೇಶದಲ್ಲಿನ ಭದ್ರತಾ ವೈಫಲ್ಯದ ಲಾಭವನ್ನು ಪಡೆದು, ಅಪರಾಧ ಕೃತ್ಯ ಎಸಗಲು ದುಷ್ಕರ್ಮಿಗಳು ಬಳಸಿಕೊಂಡಿದ್ದು, ಅವರ ಗುರುತನ್ನು ಇನ್ನಷ್ಟೇ ಪತ್ತೆ ಹಚ್ಚಬೇಕಿದೆ" ಎಂದು ಅಧಿಕಾರಿಯೊಬ್ಬರು ಹೇಳಿದ್ದಾಗಿ ವರದಿಯಾಗಿದೆ.

"ಘಟನಾ ಸ್ಥಳಕ್ಕೆ ನಾವು ಸಿಆರ್‌ಪಿಎಫ್‌ನೊಂದಿಗೆ ಸಂಯೋಜಿತ ತಂಡವನ್ನು ಕಳುಹಿಸಿದ್ದೇವೆ" ಎಂದು ಜಿರಿಬಾಮ್ ಪೊಲೀಸ್ ವರಿಷ್ಠಾಧಿಕಾರಿ ಎಂ ಪ್ರದೀಪ್ ಸಿಂಗ್ ಹೇಳಿರುವುದಾಗಿ ದಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ. "ಕೊಂಚ ಉದ್ವಿಗ್ನತೆ ಇತ್ತು. ಆದರೆ, ಅದು ಮತ್ತಷ್ಟು ಉಲ್ಬಣಗೊಳ್ಳದಂತೆ ನಾವು ಪರಿಸ್ಥಿತಿ ನಿಯಂತ್ರಿಸಿದ್ದೇವೆ. ಇಂತಹ ಘಟನೆಗಳು ಮರುಕಳಿಸದಂತೆ ತಡೆಯುವುದು ಹೇಗೆ ಎಂಬುದರ ಕುರಿತು ಚರ್ಚಿಸಲು ಸಭೆ ನಡೆಸುತ್ತಿದ್ದೇವೆ" ಎಂದು ಪ್ರದೀಪ್ ಸಿಂಗ್ ಹೇಳಿದ್ದಾರೆ.

ಜನಜಾಗೃತಿ ಧರ್ಮ ಸಮಾವೇಶದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು


# ಶ್ರಮದ ಬೆವರಿನ ಫಲ ಶಾಶ್ವತ

**■ವಿಜಯಸಾಕ್ಷಿ ಸುದ್ದಿ, ದಾವಣಗೆರೆ**

ಮನುಷ್ಯ ಜೀವನದಲ್ಲಿ ಬದಲಾವಣೆ, ಬೆಳವಣಿಗೆ ಎರಡೂ ಅವಶ್ಯಕ. ಶ್ರಮದ ಬೆವರಿನ ಫಲ ಶಾಶ್ವತ ಮತ್ತು ಸುಖದಾಯಕ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ನಗರದ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಮಂಗಲ ಭವನದಲ್ಲಿ ಶ್ರೀಮದ್ವೀರಶೈವ ಸದ್ಬೋಧನ ಸಂಸ್ಥೆ ಸಂಘಟಿಸಿದ್ದ ಜನಜಾಗೃತಿ ಧರ್ಮ ಸಮಾವೇಶದ 4ನೇ ದಿನದ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಆದರ್ಶಗಳೇ ದಾರಿದೀಪ. ಪ್ರಗತಿಪರವಾದ ಧ್ಯೇಯೋದ್ದೇಶಗಳು ಮಾನವ ಜೀವನದ ಉನ್ನತಿಗೆ ಸಹಕಾರಿಯಾಗಿವೆ. ದೇಹವನ್ನು ದುಡಿಮೆಗೆ ಮತ್ತು ಮನಸ್ಸನ್ನು ಭಗವಂತನಿಗೆ ಅರ್ಪಿಸಿ ನಡೆದಾಗ ಬದುಕು ಉಜ್ವಲಗೊಳ್ಳುತ್ತದೆ. ಸಮಾಜದ ಓರೆ-ಕೋರೆಗಳನ್ನು ತಿದ್ದಿ ತೀಡಿ ಮುನ್ನಡೆಸುವುದೇ ಮಹಾನುಭಾವರ ಕರ್ತವ್ಯವಾಗಿದೆ. ಸಂಪತ್ತು ಬೆಳೆದಂತೆ ಸಂಸ್ಕೃತಿ ಬೆಳೆಯಬೇಕು. ಮನುಷ್ಯನ ಬುದ್ಧಿ ಶಕ್ತಿ ಬೆಳೆದಂತೆ ಭಾವನೆಗಳು ಬೆಳೆಯಲಾರದ್ದೇ ಇಂದಿನ ಎಲ್ಲ ಅವಾಂತರಗಳಿಗೆ ಕಾರಣವೆಂದರೆ ತಪ್ಪಾಗದು. ವೀರಶೈವ ಧರ್ಮದ ಸಂವಿಧಾನದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಕ್ರಿಯಾಶೀಲ ಬದುಕು ಉಜ್ವಲ ಬಾಳಿಗೆ ಸ್ಫೂರ್ತಿಯಾಗಿವೆ ಎಂದರು.



ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಮಾಜಿ ಶಾಸಕ ಡಾ. ಎ.ಎಚ್. ಶಿವಯೋಗಿಸ್ವಾಮಿಯವರು ಮಾತನಾಡಿ, ಆಧ್ಯಾತ್ಮಿಕ ಮತ್ತು ಲೌಕಿಕ ಒಂದೇ ನಾಣ್ಯದ ಎರಡು ಮುಖಗಳು. ಧರ್ಮ ಆಧ್ಯಾತ್ಮಿಕತೆ ಆದರ್ಶ ಬದುಕಿಗೆ ಆಶಾಕಿರಣವಾಗಿವೆ. ಧರ್ಮದ ಆದರ್ಶ ಚಿಂತನೆಗಳು ಭಾರತೀಯರ ಬದುಕಿಗೆ ಸಜ್ಜನಿಕೆಯ ಜೀವ ತುಂಬಿದೆ. ಶ್ರೀ ರಂಭಾಪುರಿ ಜಗದ್ಗುರುಗಳವರ ದೂರದೃಷ್ಟಿ ಮತ್ತು ಸಾಮಾಜಿಕ ಚಿಂತನೆಗಳು ಬದುಕಿನ ವಿಕಾಸಕ್ಕೆ ಅಡಿಪಾಯವಾಗಿದೆ ಎಂದರು.

> ದಾವಣಗೆರೆ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಮಾತನಾಡಿ, ಇಂತಹ ಧರ್ಮ ಸಮಾರಂಭಗಳಲ್ಲಿ ಪಾಲ್ಗೊಳ್ಳುವ ತಂದೆ-ತಾಯಂದಿರು ತಮ್ಮ ಮಕ್ಕಳನ್ನೂ ಕರೆತರಬೇಕು. ಮಕ್ಕಳಲ್ಲಿಯೂ ಧಾರ್ಮಿಕ ಭಾವನೆಗಳನ್ನು ಬೆಳೆಸುವ ಕಾರ್ಯ ಮಾಡಬೇಕು. ಯುವ ಸಮೂಹ ಧರ್ಮ ಕಾರ್ಯಗಳಲ್ಲಿ ಆಸಕ್ತಿಯಿಂದ ಪಾಲ್ಗೊಳ್ಳುವಂತಾಗಬೇಕು ಎಂದರು.

ಎಪಿಎಂಸಿ ಮಾಜಿ ಅಧ್ಯಕ್ಷ ಎನ್.ಜಿ. ಪುಟ್ಟಸ್ವಾಮಿ, ಅ.ಭಾ.ವೀ ಮಹಾಸಭೆ ಜಿಲ್ಲಾಧ್ಯಕ್ಷ ಐಗೂರು ಚಂದ್ರಶೇಖರ ಅತಿಥಿಗಳಾಗಿದ್ದರು. ಕೈಗಾರಿಕೋದ್ಯಮಿ ಶಿವಗಂಗ ಶ್ರೀನಿವಾಸ ಇವರಿಗೆ 'ಶ್ರಮ ಸೇವಾ ಸಂಜೀವಿನಿ' ಪ್ರಶಸ್ತಿಯಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು. ತಾವರಕೆರೆ ಶಿಲಾಮಠದ ಡಾ.ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿದರು.

ಸಮಾರಂಭದಲ್ಲಿ ಡಾ. ಎಸ್. ಎಸ್. ನೇತ್ರಾವತಿ, ಜಾನಪದ ಕಲಾವಿದ ಮಹೇಶ್ವರಗೌಡ ಲಿಂಗದಹಳ್ಳಿ, ಎಸ್.ಪರಮೇಶ್ವರಪ್ಪ ಬಣಕಾರ, ಜಿ.ಹೆಚ್. ನಾಗರಾಜಪ್ಪ, ವಿರೂಪಾಕ್ಷಪ್ಪ ಅಣಜಿ, ಕೆ.ವಿ. ಗುರುರಾಜ್, ವೀರಮ್ಮ ಆವರಗೊಳ್ಳ, ಪುಷ್ಪ ಆವರಗೊಳ್ಳ ಪಾಲ್ಗೊಂಡಿದ್ದರು.

ಮಳಲಿ ಡಾ. ನಾಗಭೂಷಣ ಶಿವಾಚಾರ್ಯರು, ಚನ್ನಗಿರಿ ಕೇದಾರ ಶಿವಶಾಂತವೀರ ಶಿವಾಚಾರ್ಯರು, ಹನುಮಾಪುರದ ಸೋಮಶೇಖರ ಶಿವಾಚಾರ್ಯರು, ನಂದಿತಾವರೆ ಸಿದ್ಧಲಿಂಗ ಶಿವಾಚಾರ್ಯರು ಉಪಸ್ಥಿತರಿದ್ದರು.

ಟಿ.ಜಿ. ಸುರೇಶ ಸ್ವಾಗತಿಸಿದರು. ಪಂಚಾಕ್ಷರಯ್ಯನವರು ಶ್ರೀ ರಂಭಾಪುರಿ ಜಗದ್ಗುರುಗಳಿಗೆ ಗೌರವ ಮಾಲಾರ್ಪಣೆ ಸಲ್ಲಿಸಿದರು. ಹರಿಹರದ ಕಾಂತರಾಜ-ವೀರೇಶ ಬಡಿಗೇರ ಸಂಗೀತ ಸೇವೆ ಸಲ್ಲಿಸಿದರು. ಪ್ರೊ.ಮಲ್ಲಯ್ಯ ನಿರೂಪಿಸಿದರು.

## ಭದ್ರಾ ಡ್ಯಾಂ ನೀರು ಹೊರಕ್ಕೆ



**■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ತುಂಗಭದ್ರಾ ನದಿಯಲ್ಲಿ ಭದ್ರಾ ಡ್ಯಾಂ ನೀರು ಹರಿಬಿಟ್ಟ ಕಾರಣ ತಾಲೂಕಿನ ನದಿ ಪಾತ್ರದ ಜಮೀನುಗಳಿಗೆ ನೀರು ನುಗ್ಗಿದೆ. ತಾಲೂಕಿನ ಹಲುವಾಗಲು ಹಾಗೂ ಗರ್ಭಗುಡಿಯ ಮಧ್ಯೆ ಒಟ್ಟಾರೆ ಅಂದಾಜು 500 ಎಕರೆಯಷ್ಟು ಪ್ರದೇಶ ಜಲಾವೃತವಾಗಿದೆ. ತುಂಗಭದ್ರಾ ನದಿ ಪಕ್ಕದಲ್ಲಿರುವ ಶಿವಯ್ಯನ ಹಳ್ಳಕ್ಕೆ ನದಿ ನೀರು ನುಗ್ಗಿದ ಪರಿಣಾಮ, ಎರಡೂ ಭಾಗದಲ್ಲಿ 3 ಅಡಿಗಳಷ್ಟು ನೀರು ಸಂಗ್ರಹವಾಗಿದ್ದು, ವಾಹನ ಸಂಚಾರಕ್ಕೆ ತೊಂದರೆಯಾಗಿದೆ.

ನಿಟ್ಟೂರಿನಿಂದ ನಂದ್ಯಾಲಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯ ಬದಿಯಲ್ಲಿ ಸುಮಾರು 50 ಎಕರೆಯಷ್ಟು ಭತ್ತ ನಾಟಿ ಮಾಡಿರುವ ಜಮೀನುಗಳಿಗೆ ನೀರು ನುಗ್ಗಿದೆ. ಭದ್ರಾ ಜಲಾಶಯದಿಂದ 65000 ಕ್ಯೂಸೆಕ್‌ನಷ್ಟು ನೀರು ಬಿಟ್ಟ ಪರಿಣಾಮ ತಾಲೂಕಿನ ನದಿ ಪಾತ್ರದ ಗ್ರಾಮದ ಜಮೀನುಗಳಿಗೆ ನೀರು ನುಗ್ಗಿದೆ. ನೀರಿನ ಪ್ರಮಾಣ ಹೆಚ್ಚಾದರೆ ನಿಟ್ಟೂರು ಗ್ರಾಮದ 8 ಮನೆಗಳು ಸೇರಿದಂತೆ ನದಿ ಪಾತ್ರದ ಗ್ರಾಮಗಳ ಜಮೀನುಗಳಿಗೆ ಹಾನಿಯಾಗುವ ಸಾಧ್ಯತೆಯಿದೆ ಎಂದು ತಹಸೀಲ್ದಾರ್ ಬಿ.ವಿ. ಗಿರೀಶ್ ಬಾಬು ತಿಳಿಸಿದ್ದಾರೆ.

## ಕ್ಲಸ್ಟರ್ ಮಟ್ಟದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟ




**■ವಿಜಯಸಾಕ್ಷಿ ಸುದ್ದಿ, ಗದಗ**

ನಾಗಾವಿ ಗ್ರಾ.ಪಂ ವ್ಯಾಪ್ತಿಯ ಸಿದ್ರಾಮೇಶ್ವರ ನಗರದ (ನಾಗಾವಿ ತಾಂಡಾ) ಬೆಳಧಡಿ ಕ್ಲಸ್ಟರ್ ಮಟ್ಟದ ಕ್ರೀಡಾಕೂಟವು ಇಲ್ಲಿನ ಸ.ಹಿ.ಪ್ರಾ. ಶಾಲೆ ಸಿದ್ರಾಮೇಶ್ವರ ನಗರದಲ್ಲಿ ನಡೆಯಿತು. ತಾಲೂಕಾ ದೈಹಿಕ ಶಿಕ್ಷಣಾಧಿಕಾರಿ ಟಿ.ಎಸ್. ಪವಾರ, ಬಿ.ಆರ್.ಸಿ. ಸಮನ್ವಯ ಅಧಿಕಾರಿ ಜೆ.ಎ. ಭಾವಿಕಟ್ಟಿ, ವಿ.ಸಿ. ನರೇಗಲ್‌ಮಠ, ಬಿ.ವಾಯ್. ಹುಡೇದಮನಿ, ಸಿ.ಆರ್.ಪಿ.ಗಳು ಭಾಗವಹಿಸಿದ್ದರು.ಎಸ್.ವಿ. ದಂಡಗಿ ಪ್ರಾರ್ಥಿಸಿದರು. ಶಾಲೆಯ ಮುಖ್ಯೋಪಾಧ್ಯಾಯೆ ವಾಯ್.ಬಿ. ರೇವಣಕಿ ಸ್ವಾಗತಿಸಿದರು. ಪಿ.ಐ. ತಳೆವಾಡ ಹಾಗೂ ಎಸ್.ಬಿ. ಕದಾಂಪೂರ ಕಾರ್ಯಕ್ರಮ ನಿರೂಪಿಸಿದರು. ಕ್ಲಸ್ಟರಿನ ಸಿ.ಆರ್.ಪಿ ಸಿ.ಬಿ. ಪಾಟೀಲ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಗ್ರಾ.ಪಂ ಅಧ್ಯಕ್ಷ ಸುರೇಶ ಪವಾರ ಹಾಗೂ ಹಿರಿಯರಾದ ಕುಬೇರಪ್ಪ ರಾ. ರಾಠೋಡ, ಯಮನಪ್ಪ ಬಾಗಲಕೋಟ, ಗೌರಿ ತೋಟದ, ಕವಿತಾ ಪವಾರ, ಮೀರಾಬಾಯಿ ಲಮಾಣಿ, ಎಸ್‌ಡಿಎಂಸಿ ಅಧ್ಯಕ್ಷ ಸೋಮಪ್ಪ ಪವಾರ, ಉಪಾಧ್ಯಕ್ಷೆ ಸಂಗೀತಾ ಚವ್ಹಾಣ, ಸದಸ್ಯರು ಸೇರಿ ಪಂದ್ಯಾಟವನ್ನು ಯಶಸ್ವಿಗೊಳಿಸಿದರು.

## ವಿಶೇಷ ಶ್ರಾವಣ ಪೂಜೆ ಇಂದಿನಿಂದ

**■ವಿಜಯಸಾಕ್ಷಿ ಸುದ್ದಿ, ಅಜ್ಜಂಪುರ**



ಪರಮ ತಪಸ್ವಿ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ತಪಸ್ಸನ್ನಾಚರಿಸಿದ ಬುಕ್ಕಾಂಬುಧಿ ಬೆಟ್ಟದ ತಪೋಕ್ಷೇತ್ರದಲ್ಲಿರುವ ಮಂಗಲ ಮೂರ್ತಿಗೆ ಆಗಸ್ಟ್ 4, ಅಮಾವಾಸ್ಯೆಯ ಪರ್ವ ಕಾಲದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಪೂಜೆ ಸಲ್ಲಿಸುವುದರೊಂದಿಗೆ ಶ್ರಾವಣ ಪೂಜೆಗೆ ಚಾಲನೆ ನೀಡುವರು.


ಆಗಸ್ಟ್ 4ರಿಂದ ಪ್ರಾರಂಭಗೊಂಡ ವಿಶೇಷ ಶ್ರಾವಣ ಮಾಸದ ಪೂಜೆ ಸೆಪ್ಟಂಬರ್ 2ರವರೆಗೆ ಜರುಗುತ್ತದೆ ಎಂದು ಶ್ರೀಮದುಜ್ಜಯಿನಿ ಜಗದ್ಗುರು ಸಿದ್ಧಲಿಂಗ ಶಿವಾಚಾರ್ಯ ಟ್ರಸ್ಟ್ ತಿಳಿಸಿದೆ. ಪೂಜೆ ಸಲ್ಲಿಸುವ ಭಕ್ತಾದಿಗಳು ಅಧಿಕೃತವಾಗಿ ತಮ್ಮ ಹೆಸರು ದಾಖಲಿಸಿ ಶ್ರಾವಣ ಪೂಜೆಯಲ್ಲಿ ಪಾಲ್ಗೊಳ್ಳಬಹುದು ಎಂದು ಟ್ರಸ್ಟಿನ ಉಪಾಧ್ಯಕ್ಷ ಮರುಳಸಿದ್ಧಪ್ಪ, ಕಾರ್ಯದರ್ಶಿ ಸುರೇಶ ಮಾಹಿತಿ ನೀಡಿದ್ದಾರೆ.

## ಜಲಶಕ್ತಿ ಮಾಹಿತಿ ಕೇಂದ್ರಕ್ಕೆ ಭೇಟಿ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಲ್ಲಾ ಪಂಚಾಯಿತಿಯ ನೂತನ ಕಟ್ಟಡದಲ್ಲಿರುವ ಜಲಶಕ್ತಿ ಮಾಹಿತಿ ಕೇಂದ್ರಕ್ಕೆ ಕೇಂದ್ರ ಸರಕಾರದ ಜಂಟಿ ಕಾರ್ಯದರ್ಶಿ ಶುಭೋದ ಯಾದವ ಹಾಗೂ ದೆಹಲಿ ತಂಡದ ಸದಸ್ಯರು ಭೇಟಿ ನೀಡಿ, ಮಾಹಿತಿ ಪಡೆದಕೊಂಡರು.

ಜಂಟಿ ನಿರ್ದೇಶಕ ಶುಭೋದ ಯಾದವ (ಂಜಟುಟಿ. ಖಅ & ಉಫ) & ಅಗಿಜಿ ಒ/ಠ ಎಚಿಟ ಋಚಿಳಾಣು. ಆ/ಠ ಫಚಿಣಜಡಿ ಖಿಫಂಣಡಿಥಿಷಿ.ಖಿಆ&ಉಖ ದೆಹಲಿ ಕೇಂದ್ರ ತಂಡವು ಭೇಟಿ ನೀಡಿ ಜಲ ಶಕ್ತಿ ಕೇಂದ್ರದ ಕುರಿತು ಮೆಚ್ಚುಗೆ ವ್ಯಕ್ತಪಡಿಸಿ, ಕರ್ನಾಟಕ ವಿಜ್ಞಾನ ಕೇಂದ್ರದ ಜೊತೆ ಒಗ್ಗೂಡಿಸಿಕೊಂಡು ರೈತರಿಗೆ ಜಲ ಶಕ್ತಿ ಕಾಮಗಾರಿಗಳ ಕುರಿತು ಮಾಹಿತಿಯನ್ನು ನೀಡಲು ಸೂಚನೆ ನೀಡಿದರು.



ಪರಿಶೀಲನೆಯ ನಂತರ ಜಂಟಿ ನಿರ್ದೇಶಕ ಶುಭೋದ ಯಾದವ ಮತ್ತು ತಂಡವು ರಾಮಪುರ ಗ್ರಾಮ ಪಂಚಾಯತ ವ್ಯಾಪ್ತಿಯ ಸಿದ್ದಾಪುರ ಗ್ರಾಮದ ಸರಕಾರಿ ಕಿ.ಪ್ರಾ ಶಾಲೆ ಮಳೆ ನೀರು ಕೊಯ್ಲು ಕಾಮಗಾರಿ ಪರಿಶೀಲನೆ ಮಾಡಿದರು. ನಂತರ ಅವರು ಕಲ್ಲಾಪುರ ಗ್ರಾಮದ ಅಮೃತ ಸರೋವರ ಮತ್ತು ಬೋರ್‌ವೆಲ್ ಮರುಪೂರ್ಣ ಗುಂಡಿ ಪರಿಶೀಲಿಸಿ, ಗ್ರಾಮದ ಜನರೊಂದಿಗೆ ಸಂವಾದ ನಡೆಸಿದರು. ಕಾಮಗಾರಿ ಹಾಗೂ ಸಾರ್ವಜನಿಕರಿಂದ ಜಲಶಕ್ತಿ ಯೋಜನೆ ಅನುಕೂಲತೆ ಬಗ್ಗೆ ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಉಪ ಕಾರ್ಯದರ್ಶಿ ದೀಪಕ ಮಡಿವಾಳರ, ಜಿಲ್ಲಾ ಮಟ್ಟದ ಅಧಿಕಾರಿಗಳು ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು (ಗ್ರಾ.ಉ.), ಜಿಲ್ಲಾ ಪಂಚಾಯತ್ ಸಿಬ್ಬಂದಿಗಳು ಮತ್ತು ಆಯಾ ತಾಲೂಕಿನ ಐಇಸಿ ಸಂಯೋಜಕರು ಉಪಸ್ಥಿತರಿದ್ದರು.

## ಇನ್ನರ್‌ವ್ಹೀಲ್ ಮಿಡ್‌ಟೌನ್ ಕ್ಲಬ್, ರೋಟರಿ ಕ್ಲಬ್ ವತಿಯಿಂದ ನೇತ್ರ ಶಸ್ತ್ರಚಿಕಿತ್ಸಾ ಶಿಬಿರ ಯಶಸ್ವಿ




**■ವಿಜಯಸಾಕ್ಷಿ ಸುದ್ದಿ, ಗದಗ**

ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ, ರೋಟರಿ ಕ್ಲಬ್ ಗದಗ-ಬೆಟಗೇರಿ ಹಾಗೂ ಇನ್ನರ್‌ವ್ಹಲ್ ಸಂಸ್ಥೆ ಗದಗ ಮಿಡ್‌ಟೌನ್ ಇವುಗಳ ಸಂಯುಕ್ತಾಶ್ರಯದಲ್ಲಿ ಜರುಗಿದ 194ನೇ ನೇತ್ರ ಶಸ್ತ್ರಚಿಕಿತ್ಸಾ ಶಿಬಿರದಲ್ಲಿ 8 ಜನರಿಗೆ ಯಶಸ್ವಿಯಾಗಿ ಕಣ್ಣಿನ ಶಸ್ತ್ರ ಚಿಕಿತ್ಸೆಯನ್ನು ನೆರವೇರಿಸಲಾಯಿತು.

ಕಣ್ಣಿನಲ್ಲಿ ಮಸೂರ ಅಳವಡಿಸುವ ಈ ಶಸ್ತ್ರಚಿಕಿತ್ಸೆಯನ್ನು ಪ್ರೀತಿ ವಿಶ್ವನಾಥ ಶಿವಪ್ಪನಮಠ ಮತ್ತು ದಿ. ಉಷಾದೇವಿ ಗೋವಿಂದರಾಜ ಕುಷ್ಟಗಿ ಇವರ ಸ್ಮರಣಾರ್ಥ ರೊ. ನವೀನ ಗೋವಿಂದರಾಜ ಕುಷ್ಟಗಿ ಪ್ರಾಯೋಜತ್ವವನ್ನು ವಹಿಸಿದ್ದರು. ಸುಮಾರು 22 ಜನ ರೋಗಿಗಳನ್ನು ತಪಾಸಣೆ ಮಾಡಿ ಶಸ್ತ್ರಚಿಕಿತ್ಸೆಗೆ ಯೋಗ್ಯರಾದ 8 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆಯುನ್ನು ಕೈಗೊಂಡರು.

ಶಸ್ತ್ರ ಚಿಕಿತ್ಸೆಯ ನಂತರ ನಡೆದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೋಟರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷ ರೊ. ಶ್ರೀಧರ ಸುಲ್ತಾನಪೂರ ವಹಿಸಿ, ಪ್ರಾಯೋಜತ್ವ ವಹಿಸಿದ ಪ್ರೀತಿ ವಿಶ್ವನಾಥ ಶಿವಪ್ಪನಮಠ ಹಾಗೂ ರೊ.ನವೀನ ಗೋವಿಂದರಾಜ ಕುಷ್ಟಗಿಯವರಿಗೆ ಧನ್ಯವಾದ ಸಲ್ಲಿಸಿದರು.

ಸಂಸ್ಥೆಯ ಅಧ್ಯಕ್ಷ ರೊ. ಡಾ. ಆರ್.ಬಿ. ಉಪ್ಪಿನ ಹಾಗೂ ಕಾರ್ಯದರ್ಶಿ ರೊ. ಸಂತೋಷ ಅಕ್ಕಿ ಇನ್ನರ್ ಅಸಿಸ್ಟಂಟ ಗವರ್ನರ್ ಶಿವಾಚಾರ್ಯ ಎಸ್.ಹೊಸಳ್ಳಿಮಠ, ಇನ್ನರ್‌ವ್ಹೀಲ್ ಅಧ್ಯಕ್ಷರಾದ ಪ್ರೀತಿ ಶಿವಪ್ಪನಮಠ, ಕಾರ್ಯದರ್ಶಿ ರಾಣಿ ಚಂದಾವರಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು.


ರೋಟರಿ ಸಂಸ್ಥೆ ವೆಲ್‌ಫೇರ್ ಸೊಸೈಟಿಯ ಕಾರ್ಯದರ್ಶಿ ರೊ. ಬಾಲಕೃಷ್ಣ ಕಾಮತ್ ಕಾರ್ಯಕ್ರಮ ನಿರೂಪಿಸಿದರು ವಂದಿಸಿದರು. ರೋಟರಿ ಸದಸ್ಯರಾದ, ರೊ. ಡಾ. ಪ್ರದೀಪ ಉಗಲಾಟ, ರೊ. ಹೆಚ್.ಎಸ್. ಪಾಟೀಲ, ರೊ. ವೀಣಾ ತಿರ್ಲಾಪೂರ, ರೊ. ಅಕ್ಷಯ ವ್ಹಿ.ಶೆಟ್ಟಿ, ರೊ. ಚನ್ನವೀರ ಹುಣಶಿಕಟ್ಟಿ, ರೊ. ಮಹೇಶ ಹಿಂಡಿ, ರೊ. ವಿಶ್ವನಾಥ ಯಳಮಲಿ, ಐ.ಎಸ್.ಓ ಗೀತಾ ಭಿಕ್ಷಾವತಿಮಠ, ಮಾಜಿ ಅಧ್ಯಕ್ಷರಾದ ಅನುಪಮ ಜೋಳದ ಮುಂತಾದವರು ಉಪಸ್ಥಿತರಿದ್ದರು.

ಶಿಬಿರದಲ್ಲಿ ರುದ್ರೇಶ, ನೇತ್ರಾ, ಮಲ್ಲಪ್ಪ ಕುಂಬಾರ, ಜ್ಯೋತಿ ದೊಡ್ಡಮನಿ, ದೀಪಾ, ಆನಂದ ಸಿಂಗ್ರಿ ಸಹಕರಿಸಿದರು.

## ಕರ್ನಾಟಕ ರಕ್ಷಣಾ ವೇದಿಕೆಗೆ ಸೇರ್ಪಡೆ

**■ವಿಜಯಸಾಕ್ಷಿ ಸುದ್ದಿ, ಗದಗ**


ನಗರದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡರ ಹೋರಾಟಗಳನ್ನು, ಕರವೇ ತತ್ವ-ಸಿದ್ಧಾಂತಗಳನ್ನ ಮೆಚ್ಚಿ, ಗದಗ ನಗರದ 1ನೇ ವಾರ್ಡ್ ಹಾಗೂ 24ನೇ ವಾರ್ಡಿನ ಯುವಕರು ಕರ್ನಾಟಕ ರಕ್ಷಣಾ ವೇದಿಕೆಯ ಗದಗ ಜಿಲ್ಲಾಧ್ಯಕ್ಷ ಹನುಮಂತಪ್ಪ ಅಬ್ಬಿಗೇರಿ ನೇತೃತ್ವದಲ್ಲಿ ಜಿಲ್ಲಾ ಮುಖಂಡರಾದ ವಿನಾಯಕ ಬದಿ ಹಾಗೂ ದಾವಲಸಾಬ್ ತಹಶೀಲ್ದಾರ್, ಶಿರಾಜ. ಹೊಸಮನಿ ಸಮ್ಮುಖದಲ್ಲಿ ಸೇರ್ಪಡೆಗೊಂಡರು.



ಈ ಸಂದರ್ಭದಲ್ಲಿ ಎಲ್ಲೇಶ್ ಬಳ್ಳಾರಿ, ಖಾಜಾಸಾಬ್ ದಂಡಿನ್, ಜಂದೀಸಾಬ್ ಸವನೂರ್, ಕರೀಂ ಕವಾಸ್, ಮಂಜುನಾಥ್ ತೊಂಡೆಹಾಳ್, ಸದ್ದಾಮ್ ಹುಸೇನ್ ತಹಸೀಲ್ದಾರ್, ಮೆಹಬೂಬ್ ಡಾಲಾಯತ್, ಇಬ್ರಾಹಿಂ ನಾಶಿಪುಡಿ ಸೇರಿದಂತೆ ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.

## ಬಸವರಾಜ ಶ್ರೀಗಳಿಂದ ಮೌನ ಶಿವಯೋಗಾನುಷ್ಠಾನ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**



ತಾಲೂಕಿನ ಬೆಳ್ಳಟ್ಟಿಯ ಶ್ರೀ ರಾಮಲಿಂಗೇಶ್ವರ ದಾಸೋಹ ಮಠದ ಪೀಠಾಧಿಪತಿ ಬಸವರಾಜ ಸ್ವಾಮೀಜಿಗಳಿಂದ ಲೋಕಕಲ್ಯಾಣಾರ್ಥವಾಗಿ 10ನೇ ಮೌನ ಶಿವಯೋಗಾನುಷ್ಠಾನವು ಅ.5ರಿಂದ ಪ್ರಾರಂಭವಾಗಿ ಸೆ.4ರವರೆಗೆ ಜರುಗಿ ಮಂಗಲವಾಗಲಿದೆ ಎಂದು ಶ್ರೀಮಠದ ಭಕ್ತ ರಾಜೀವರೆಡ್ಡಿ ಬಮ್ಮನಕಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಾತೋಶ್ರೀ ಬಸಮ್ಮ ಸಂಗನಗೌಡ ಪಾಟೀಲರ 20ನೇ ಪುಣ್ಯಸ್ಮರಣೋತ್ಸವ

# ತಾಯಿಯ ಸ್ಮರಣೆಯಲ್ಲಿ ಸಮಾಜಮುಖಿ ಕಾರ್ಯ

**■ವಿಜಯಸಾಕ್ಷಿ ಸುದ್ದಿ, ರೋಣ**

ಮಾತೋಶ್ರೀ ಬಸಮ್ಮನವರು ತಮ್ಮ ಜೀವನವನ್ನು ಬಡ ಹಾಗೂ ನಿರ್ಗತಿಕರ ಏಳ್ಗೇಗಾಗಿ ಶ್ರಮಿಸಿದರು. ಈ ಹಿನ್ನೆಲೆಯಲ್ಲಿ ಮಹಿಳಾ ಮಂಡಳ ಸ್ಥಾಪಿಸಿ ಬಡ ಮಹಿಳೆಯರ ಉನ್ನತಿಯನ್ನು ಕಂಡವರು. ಇದರಿಂದ ಪ್ರೇರಿತರಾದ ಪಾಟೀಲ ಕುಟುಂಬದ ಸದಸ್ಯರು ತಾಯಿಯವರ ಸ್ಮರಣೆ ನಿಮಿತ್ತ ಸಮಾಜಮುಖಿ ಕಾರ್ಯಗಳನ್ನು ನಡೆಸಿಕೊಂಡು ಬರುತ್ತಿರುವುದು ಶ್ಲಾಘನೀಯ ಎಂದು ಗುರುಪಾದ ಶ್ರೀಗಳು ಹೇಳಿದರು.

ಅವರು ಪಟ್ಟಣದ ಅಕ್ಕಮಹಾದೇವಿ ಕಲ್ಯಾಣ ಮಂಟಪದಲ್ಲಿ ಜರುಗಿದ ಮಾತೋಶ್ರೀ ಬಸಮ್ಮ ಸಂಗನಗೌಡ ಪಾಟೀಲರವರ 20ನೇ ಪುಣ್ಯಸ್ಮರಣೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಆನಂದ ಮಲ್ಲಿಗವಾಡ ಮಾತನಾಡಿ, ಶಾಸಕ ಜಿ.ಎಸ್. ಪಾಟೀಲರು ತಮ್ಮ ತಾಯಿಯವರ ಪುಣ್ಯಸ್ಮರಣೆ ನಿಮಿತ್ತ ಕೆರೆಗಳ ನಿರ್ಮಾಣ ಹಾಗೂ ರಕ್ಷಣೆ ಬಗ್ಗೆ ವಿಚಾರ ಗೋಷ್ಠಿ ನಡೆಸಿದ್ದು ಶ್ಲಾಘನೀಯವಾಗಿದೆ. ಪಾಟೀಲರು ತಮ್ಮ ಕ್ಷೇತ್ರದಲ್ಲಿ ಸಾವಿರಾರು ಕೆರೆಗಳ ಜೊತೆಗೆ ಕೃಷಿ ಹೊಂಡಗಳನ್ನು ನಿರ್ಮಿಸಿರುವುದು ಅತಿ ದೊಡ್ಡ ಸಾಧನೆಯಾಗಿದೆ ಎಂದ ಅವರು, ಮುಂದಿನ ಪೀಳಿಗೆಯಾದರೂ ಬಾವಿ ಮತ್ತು ಕೆರೆಗಳನ್ನು ಸಂರಕ್ಷಣೆ ಮಾಡಬೇಕಿದೆ ಎಂದರು.



ಹಾಲಕೇರಿ ಮುಪ್ಪಿನ ಬಸವಲಿಂಗ ಶ್ರೀಗಳು, ಗಂಗಾಧರ ಶ್ರೀಗಳು, ಚನ್ನಬಸವ ಶ್ರೀಗಳು, ಡಾ. ರಾಜೇಂದ್ರ ಶಿವಯೋಗಿ ಮುತ್ಯಾನವರು ಸಾನ್ನಿಧ್ಯ ವಹಿಸಿದ್ದರು. ಮಾಜಿ ಸಂಸದ ಆರ್.ಎಸ್. ಪಾಟೀಲ, ಬಿ.ಎಸ್. ಪಾಟೀಲ, ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕರಾದ ದೊಡ್ಡನಗೌಡ ಪಾಟೀಲ, ಬಿ.ಆರ್. ಯಾವಗಲ್ಲ, ರಾಮಕೃಷ್ಣ ದೊಡ್ಡಮನಿ, ಐ.ಎಸ್. ಪಾಟೀಲ, ಸಂಗನಗೌಡ ಪಾಟೀಲ, ಅಕ್ಷಯ ಪಾಟೀಲ, ಟಿ. ಈಶ್ವರ, ವಿ.ಬಿ. ಸೋಮನಕಟ್ಟಿಮಠ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

> ಶಾಸಕ ಜಿ.ಎಸ್. ಪಾಟೀಲರ ಜೊತೆ-ಗೆ ಇಡೀ ಕುಟುಂಬದವರು ಸೇರಿಕೊಂಡು ವಿವಿಧ ಸಮಾಜಮುಖಿ ಕಾರ್ಯಗಳನ್ನು ಸಮಾಜಕ್ಕೆ ಸಮರ್ಪಿಸಿ ಅದರಲ್ಲಿ ತಮ್ಮ ತಾಯಿಯವರನ್ನು ಕಾಣುತ್ತಿದ್ದಾರೆ. ಅಲ್ಲದೆ ಉಚಿತ ಕಣ್ಣಿನ ತಪಾಸಣೆ, ಮಹಿಳಾ ಗೋಷ್ಠಿ, ಕೃಷಿಗೋಷ್ಠಿ ಹೀಗೆ ಹಲವಾರು ಜನಪರವಾದ ಚಟುವಟಿಕೆಗಳನ್ನು ನಡೆಸಿ ತಾಯಿಯವರ ಪುಣ್ಯಸ್ಮರಣೆ ನಡೆಸುವುದು ಸ್ವಾಗತರ್ಹವಾಗಿದೆ ಎಂದು ಶ್ರೀಗಳು ನುಡಿದರು.

# ಆಧ್ಯಾತ್ಮ ಪ್ರವಚನ ನಾಳೆಯಿಂದ

■ವಿಜಯಸಾಕ್ಷಿ ಸುದ್ದಿ, ನರೇಗಲ್

ಸಮೀಪದ ಹಾಲಕೆರೆಯ ಶ್ರೀ ಅನ್ನದಾನೇಶ್ವರ ಸಂಸ್ಥಾನಮಠದ ಲಿಂ. ಅನ್ನದಾನ ಮಹಾಶಿವಯೋಗಿಗಗಳವರ 47ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಮುಪ್ಪಿನ ಬಸವಲಿಂಗ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ಆಗಸ್ಟ್ 5ರಿಂದ 11ರವರೆಗೆ ಸಂಜೆ 7 ಗಂಟೆಗೆ ಶ್ರೀಮಠದ ಆವರಣದಲ್ಲಿ ಆಧ್ಯಾತ್ಮ ಪ್ರವಚನ ಜರುಗಲಿದೆ. ಕಮದಹಳ್ಳಿಯ ಪಂಚಾಕ್ಷರ ಶಾಸ್ತ್ರೀ ಪ್ರವಚನ ನೀಡುವರು. ಕಲಬುರ್ಗಿಯ ಬಾಗೇಶ, ಶಶಿಕುಮಾರ ಸಂಗೀತ ಸೇವೆ ನೀಡಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಸದೃಢ ದೇಹಕ್ಕೆ ಕ್ರೀಡೆ ಅವಶ್ಯಕ



■ವಿಜಯಸಾಕ್ಷಿ ಸುದ್ದಿ, ನರೇಗಲ್

ಕ್ರೀಡೆಯಿಂದ ಮನುಷ್ಯನ ದೇಹ ಸದೃಢಗೊಂಡು ವಿದ್ಯೆ ಕಲಿಯಲು ಸಾಧ್ಯವಾಗುತ್ತದೆ. ಅದಕ್ಕಾಗಿ ಪ್ರತಿಯೊಂದು ಶಾಲೆಯಲ್ಲಿ ಕ್ರೀಡೆಯು ಅವಶ್ಯಕವಾಗಿದೆ' ಎಂದು ಅಬ್ಬಿಗೇರಿ ಸಮೂಹ ಸಂಪನ್ಮೂಲ ವ್ಯಕ್ತಿ ಎಸ್.ಆರ್. ಮೂಲಿಮನಿ ಹೇಳಿದರು. ಅವರು ಸಮೀಪದ ಕುರುಡಗಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಜರುಗಿದ 2024–25ನೇ ಸಾಲಿನ ಗ್ರಾಮ ಪಂಚಾಯಿತಿ ಮಟ್ಟದ ಕ್ರೀಡಾಕೂಟದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳು ಆರೋಗ್ಯವಾಗಿದ್ದರೆ ಮಾತ್ರ ಕಲಿಕೆಯಲ್ಲಿ ಸಾಧನೆ ಮಾಡಲು ಸಾಧ್ಯ. ಸದೃಢ ಶರೀರದಲ್ಲಿ ಸದೃಢವಾದ ಮನಸ್ಸಿರುತ್ತದೆ ಎಂದರು.ಎಸ್.ಡಿ.ಎಂ.ಸಿ ಅಧ್ಯಕ್ಷ ಮಹಿಬೂಬಸಾಬ್ ಮುಳಗುಂದ ಕ್ರೀಡಾ ಜ್ಯೋತಿ ಬೆಳಗಿಸುವುದರೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ವೇಳೆ ಗ್ರಾ.ಪಂ ಅಧ್ಯಕ್ಷ ವೀರಪ್ಪ ರಾಮಣ್ಣವರ, ಪಿಡಿಒ ಶಿಲ್ಪಾ ಕೌವಲೂರ, ಸದಸ್ಯರಾದ ನ್ಯಾಯವಾದಿ ಶೌಕತಅಲಿ ನದಾಫ್, ವಿಜಯಲಕ್ಷ್ಮೀ ವಾಲ್ಮೀಕಿ, ಪವಿತ್ರ ಕುರಿಯವರ, ಮುಖಂಡರಾದ ವೀರಣ್ಣ ಸವಡಿ, ಮಲ್ಲಯ್ಯ ವಸ್ತ್ರದ, ಉರ್ದು ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷ ರಮ್ಜಾನಸಾಬ ಚೋಪದಾರ, ಸದಸ್ಯರಾದ ರಮೇಶ್ ಜಾಧವ್, ಕಳಕನಗೌಡ ಅಯ್ಯನಗೌಡ, ಶರಣಪ್ಪ ದೊಡ್ಡಮನಿ, ಗುತ್ತಿಗೆದಾರ ಎಸ್.ಬಿ. ಗವಾರಿ, ಸಿದ್ದು ಹಿರೇಗೌಡ್ರ, ಉರ್ದು ಶಾಲಾ ಮುಖ್ಯ ಶಿಕ್ಷಕ ಎಸ್.ಆರ್. ಅಕ್ಕಿ ಸೇರಿದಂತೆ ಇನ್ನು ಅನೇಕರು ಉಪಸ್ಥಿತರಿದ್ದರು. ಕುರುಡಗಿ ಯರೆಬೇಲೇರಿ, ನಾಗರಾಳ ಗ್ರಾಮಗಳ ಸರಕಾರಿ ಶಾಲೆಯ 5 ಮತ್ತು 6ನೇ ತರಗತಿಯ ವಿದ್ಯಾರ್ಥಿಗಳು ಪಾಲ್ಗೊಂಡು ಆಟಗಳನ್ನು ಪ್ರದರ್ಶಿಸಿದರು. ಮುಖ್ಯ ಶಿಕ್ಷಕಿ ರೇಣುಕಾ ಗಡಗಿ ಸ್ವಾಗತಿಸಿದರು. ಶಿಕ್ಷಕ ಓ ಪೂರ್ಣಯ್ಯ ನಿರೂಪಿಸಿ ವಂದಿಸಿದರು.

# ಪತ್ರಿಕಾ ದಿನಾಚರಣೆ ಇಂದು

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದ ಆಶ್ರಯದಲ್ಲಿ ಮುಳಗುಂದ ಕಾರ್ಯನಿರತ ಪತ್ರಕರ್ತರಿಂದ ಆ.4ರಂದು ಬೆಳಿಗ್ಗೆ 10.30ಕ್ಕೆ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ1ರಲ್ಲಿ ಪತ್ರಿಕಾ ದಿನಾಚರಣೆ ಹಮ್ಮಿಕೊಳ್ಳಲಾಗಿದೆ.

ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಸಾನ್ನಿಧ್ಯ ವಹಿಸಲಿದ್ದು, ಉದ್ಘಾಟನೆಯನ್ನು ಆರ್.ಸಿ. ಕಮಾಜಿ, ಉಪನ್ಯಾಸ ಬಿ.ಎಂ. ಹರಪನಹಳ್ಳಿ ನೆರವೇರಿಸುವರು. ಅಧ್ಯಕ್ಷತೆಯನ್ನು ಮುಳಗುಂದ ಕಾರ್ಯನಿರತ ಪತ್ರಕರ್ತ ಸಂಘದ ಅಧ್ಯಕ್ಷ ಎಂ.ಎಂ. ಜಮಾಲಸಾಬನವರ ವಹಿಸುವರು.

ಮುಖ್ಯ ಅತಿಥಿಗಳಾಗಿ ಗದಗ ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ, ಪ.ಪಂ ಸ್ಥಾಯಿ ಸಮಿತಿ ಅಧ್ಯಕ್ಷ ಮಾಹಾಂತೇಶ ನೀಲಗುಂದ, ಎಸ್.ಎಂ. ನೀಲಗುಂದ, ಎಂ.ಡಿ. ಬಟ್ಟೂರ, ಅಶೋಕ ಸೋನಗೋಜಿ, ಬಸವರಾಜ ಸುಂಕಾಪೂರ, ಬಸವರಾಜ ಬಡ್ನಿ, ರಾಜು ಹೆಬ್ಬಳ್ಳಿ, ವಿರುಪಾಕ್ಷಪ್ಪ ಕಣವಿ, ಮಲ್ಲಪ್ಪ ಕುಂದಗೋಳ, ಶೈಯದಲಿ ಶೇಖ, ಡಾ.ಎಸ್.ಸಿ. ಚವಡಿ, ವಿ.ವಿ. ನಡುವಿನಮನಿ, ಪ್ರೀತ್ ಖೋನಾ, ವಸಂತ ಮಡ್ಲೂರ, ಮಲ್ಲಯ್ಯ ಕೊರವನವರ, ಮಂಜುನಾಥ ಗುಳೆದ, ವಿ.ಎಸ್. ಚವಡಿ, ತಾಜುದ್ದಿನ್ ಕಿಂಡ್ರಿ, ಮಂಜುನಾಥ ಅಣ್ಣಿಗೇರಿ, ಫಿರಸಾಬ ಶೇಖ ಹಾಗೂ ಪ.ಪಂ ಸರ್ವ ಸದಸ್ಯರು, ಪತ್ರಕರ್ತ ಸಂಘದ ಸದಸ್ಯರು ಉಪಸ್ಥಿತರಿರುವರು ಎಂದು ಸಂಘದ ಉಪಾಧ್ಯಕ್ಷ ವಿ.ಡಿ. ಸಿದ್ದನಗೌಡರ ತಿಳಿಸಿದ್ದಾರೆ.

### ಮುಕ್ತ ವಿಶ್ವವಿದ್ಯಾನಿಲಯದಲ್ಲಿ

# ಸ್ನಾತಕ, ಸ್ನಾತಕೋತ್ತರ ಕೋರ್ಸ್‌ಗಳಿಗೆ ಪ್ರವೇಶಾತಿ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಪ್ರಸಕ್ತ 2024–25ನೇ ಜುಲೈ ಆವೃತ್ತಿಯ ಶೈಕ್ಷಣಿಕ ಸಾಲಿಗೆ ಪ್ರವೇಶಾತಿಯ ಪ್ರಕ್ರಿಯೆ ಆರಂಭಿಸಿದ್ದು, ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಾದ ಬಿ.ಎ, ಬಿ.ಕಾಂ, ಬಿ.ಲಿಬ್, ಬಿ.ಬಿ.ಎ, ಬಿ.ಸಿ.ಎ, ಬಿ.ಎಸ್ಸಿ, ಬಿ.ಎಸ್.ಡಬ್ಲ್ಯೂ ಎಂ.ಎ, ಎಂ.ಎ–ಪತ್ರಿಕೋದ್ಯಮ, ಎಂ.ಕಾಂ, ಎಂ.ಬಿ.ಎ, ಎಂ.ಲಿಬ್, ಎಂ.ಎಸ್ಸಿ, ಎಂ.ಸಿ.ಎ, ಎಂ.ಎಸ್.ಡಬ್ಲ್ಯೂ ಹಾಗೂ ಡಿಪ್ಲೋಮಾ ಮತ್ತು ಪಿಜಿ/ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರಸಕ್ತ ಶೈಕ್ಷಣಿಕ ಸಾಲಿನ ಪ್ರವೇಶಾತಿ ಆರಂಭವಾಗಿದೆ.

ವಿದ್ಯಾರ್ಥಿಗಳು ಪ್ರಾದೇಶಿಕ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಅಧಿಕೃತ ವೆಬ್‌ಸೈಟ್ www.ksoumysuru.ac.in KSOU AdmissionPortal ಮೂಲಕ ಪ್ರವೇಶಾತಿಯ ಅರ್ಜಿಯನ್ನು ಭರ್ತಿ ಮಾಡಿ, ನಂತರ ಆನ್‌ಲೈನ್ ಮುಖಾಂತರ ಪ್ರವೇಶಾತಿ ಶುಲ್ಕ ಪಾವತಿಸಿ ಪ್ರವೇಶಾತಿಯನ್ನು ಪಡೆಯಲು ಗದಗ ಪ್ರಾದೇಶಿಕ ನಿರ್ದೇಶಕರಾದ ಸಿದ್ಧಾರ್ಥ್ ಬಿ.ಎನ್ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಗದಗ ಪ್ರಾದೇಶಿಕ ಕೇಂದ್ರ, ಡಾ.ಪಂಡಿತ್ ಪುಟ್ಟರಾಜ್ ಕವಿ ಗವಾಯಿಗಳ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ ಹತ್ತಿರ, ಎಲ್.ಎಲ್. ಕಟ್ಟಡ, ಜನರಲ್ ಕೆ.ಎಂ. ಕಾರ್ಯಪ್ಪ ವೃತ್ತ(ಹಳೆಯ ಡಿ.ಸಿ ಕಚೇರಿ ವೃತ್ತ), ಗದಗ–582101 ಹಾಗೂ ಕಚೇರಿ ದೂರವಾಣಿ ಸಂಖ್ಯೆ: 8884231002/8970555801/8618929376 ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

### 'ಮಾತೃಶ್ರೀ ಸ್ಮರಣೋತ್ಸವ' ಕಾರ್ಯಕ್ರಮದಲ್ಲಿ ಟಿ.ಎಸ್. ನಾಗಾಭರಣ ವಿಷಾದ

# ನಾವು ಯಂತ್ರ ಮಾನವರಾಗುತ್ತಿರುವದು ದುರಂತ

■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಆಧುನಿಕತೆಯ ಭರಾಟೆಯಲ್ಲಿ ಮನುಷತ್ವ ಮತ್ತು ಮಾನವೀಯ ಸಂಬಂಧಗಳು ಕಡಿಮೆಯಾಗುತ್ತಿವೆ. ಮಾಂತ್ರಿಕವಾಗಬೇಕಿದ್ದ ಸಂಬಂಧಗಳು ಯಾಂತ್ರಿಕವಾಗಿ ನಾವಿಂದು ಯಂತ್ರ ಮಾನವರಾಗುತ್ತಿರುವದು ದುರಂತದ ಸಂಗತಿ ಎಂದು ಖ್ಯಾತ ಚಲನಚಿತ್ರ ನಿರ್ದೇಶಕ ಡಾ. ಟಿ.ಎಸ್. ನಾಗಾಭರಣ ವಿಷಾದ ವ್ಯಕ್ತಪಡಿಸಿದರು.

ಅವರು ಗದುಗಿನ ಬಸವೇಶ್ವರ ಕಲಾ, ವಾಣಿಜ್ಯ ಮಹಾವಿದ್ಯಾಲಯದಲ್ಲಿ ಶ್ರೀ ಮಾತೃಶ್ರೀ ಸೇವಾ ಟ್ರಸ್ಟ್ ಗದಗ ಹಾಗೂ ಗದಗ ಜಿಲ್ಲಾ ಪೊಲೀಸ್ ಇಲಾಖೆಯ ರಾಣಿ ಚೆನ್ನಮ್ಮ ಪಡೆಯ ಸಹಯೋಗದಲ್ಲಿ ರೋಣದ ಲಿಂ. ಮಾತೋಶ್ರೀ ಬಸಮ್ಮ ತಾಯಿ ಸಂಗನಗೌಡ ಪಾಟೀಲ ಪುಣ್ಯ ಸ್ಮರಣೋತ್ಸವ ಮತ್ತು ಗುಳೇದಗುಡ್ಡದ ಲಿಂ. ಮಾತೋಶ್ರೀ ಲಕ್ಷ್ಮಮ್ಮ ತಾಯಿ ಮ.ಗೌಡರ ಇವರ ಪ್ರಥಮ ಪುಣ್ಯಸ್ಮರಣೋತ್ಸವದ ಅಂಗವಾಗಿ 'ಮಾತೃಶ್ರೀ ಸ್ಮರಣೋತ್ಸವ' ಹಾಗೂ ಮಹಿಳೆಯರ ಆತ್ಮಸಂರಕ್ಷಣೆ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಆಧುನಿಕ ಸೌಲಭ್ಯಗಳು ಒಂದೆಡೆ ಮನುಷ್ಯರನ್ನು, ಮನುಷ್ಯತ್ವವನ್ನು ದೂರ ಮಾಡುತ್ತಿವೆ ಎಂದೆನ್ನಿಸುವದು. ನಾವು ದೂರದ ಚಂದ್ರನನ್ನು ತಲುಪಿದ್ದೇವೆ. ಆದರೆ ಪಕ್ಕದಲ್ಲಿರುವ ಮನುಷ್ಯನನ್ನು ಕಡೆಗಣಿಸಿ ಮೊಬೈಲ್ ತಿಕ್ಕುತ್ತಿದ್ದೇವೆ. ಪಕ್ಕದಲ್ಲಿದ್ದವರೊಂದಿಗೆ ಸಂವಹನ ಇಲ್ಲದಂತಾಗಿದೆ.




ಕೌಟುಂಬಿಕ ಸಂಬಂಧಗಳು ಕಡಿತಗೊಳ್ಳುತ್ತಿವೆ. ಅವಿಭಕ್ತ ಕುಟುಂಬಗಳ ಕೊಂಡಿಗಳು ಕಳಚಿಕೊಂಡು ಇತಿಮಿತಿಗೊಳ್ಳುತ್ತಿವೆ. ಒಂದಾಗಿರುವ, ಚೆಂದಾಗಿರುವ ಗಟ್ಟಿತನದ ಬದುಕು ಟೊಳ್ಳು ಆಗುತ್ತಿರುವದು ವಿಷಾದನೀಯ ಎಂದರು.

ನಾವು ನಿನ್ನೆಗಳ ಬಗ್ಗೆ ಯೋಚನೆ ಮಾಡಿದಿದ್ದರೆ ನಾಳೆಯ ಬಗ್ಗೆ ಭವಿಷ್ಯ ಕಟ್ಟಲು ಆಗದು. ಸಾಮಾಜಿಕ, ಸಾಂಸ್ಕೃತಿಕ, ಧಾರ್ಮಿಕವಾದಂತ ಅದ್ಭುತವಾದ ಭವಿಷ್ಯವನ್ನು ಕಟ್ಟುವ ಮಕ್ಕಳನ್ನು ನಾವು ಅವಿಭಕ್ತ ಕುಟುಂಬದಲ್ಲಿ ಕಂಡಿದ್ದೇವೆ. ರೋಣದ ಬಸಮ್ಮತಾಯಿ ಪಾಟೀಲರು ರಾಜಮಾತೆಯಾಗಿದ್ದರು ಎಂಬುದು ಅವರ ಬದುಕಿನಿಂದ ತಿಳಿದು ಬರುವದು. ರಾಜ್ಯವನ್ನಾಳುವ ಮಕ್ಕಳನ್ನು ನಾಡಿಗೆ ನೀಡಿದ ಬಸಮ್ಮ ಅಕ್ಷರಶಃ ರಾಜಮಾತೆ ಎಂದು ಬಣ್ಣಿಸಿದರು.

ಅಧ್ಯಕ್ಷತೆ ವಹಿಸಿದ್ದ ರೋಣ ಶಾಸಕರೂ ಹಾಗೂ ಕರ್ನಾಟಕ ರಾಜ್ಯ ಖನೀಜ ಅಭಿವೃದ್ಧಿ ನಿಗಮದ ಅಧ್ಯಕ್ಷರೂ ಆದ ಜಿ.ಎಸ್.ಪಾಟೀಲ ಮಾತನಾಡಿ ತಾಯಿ ಬಸಮ್ಮ ತಂದೆ ಸಂಗನಗೌಡ ಪಾಟೀಲರು ನೀಡಿದ ಸಂಸ್ಕಾರ, ಸಂಸ್ಕೃತಿ, ಶಿಕ್ಷಣದಿಂದಾಗಿ ನಮ್ಮ ಕುಟುಂಬ ಅವಿಭಕ್ತ ಕುಟುಂಬವಾಗಿ ಬೆಳೆದು ಬಂತು ಇಂದಿಗೂ ನಾವೆಲ್ಲ ಸಹೋದರರು, ಕುಟುಂಬದವರು ಒಂದಾಗಿ ಚೆಂದಾಗಿ ಇರುವುದಕ್ಕೆ ಹಿರಿಯರು ಹಾಕಿಕೊಟ್ಟ ಸನ್ಮಾರ್ಗವೇ ಕಾರಣ ಎಂದರು.

ಸಾನ್ನಿಧ್ಯ ವಹಿಸಿದ್ದ ಜ.ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಮಾತನಾಡಿ, ಸರ್ವ ಕಾಲಕ್ಕೂ ಮಹಿಳೆ ಪೂಜ್ಯನೀಯಳು. ಕುಟುಂಬ, ಸಮಾಜ ದೇಶವನ್ನು ಪ್ರಗತಿಯಲ್ಲಿ ಮುನ್ನಡೆಸುವ ಸಾಮರ್ಥ್ಯ ತಾಯಂದಿರರಲ್ಲಿದೆ. ತೊಟ್ಟಿಲು ತೂಗುವ ಕೈ ಜಗತ್ತನ್ನೇ ತೂಗಬಲ್ಲದು ಎಂಬುದನ್ನು ಸಾಬೀತುಗೊಳಿಸಿದ್ದಾರೆ. ಕುಟುಂಬಗಳು ಒಂದಾಗಿ ಚೆಂದಾಗಿ ಇರಬೇಕೆಂದರೆ ಎಲ್ಲ ಮಹಿಳೆಯರಲ್ಲಿ ತಾಯಿ ಗುಣ ಬರಬೇಕು, ಅಂತಹ ಗುಣ ಬಸಮ್ಮನವರಲ್ಲಿ ಹಾಗೂ ಲಕ್ಷ್ಮಮ್ಮನವರಲ್ಲಿತ್ತು ಎಂದರು.

ಪ್ರಾಚಾರ್ಯ ಡಾ. ರಮೇಶ ಕಲ್ಲನಗೌಡರ ಆಶಯ ನುಡಿಗಳನ್ನಾಡಿದರು. ಮುಖ್ಯ ಅತಿಥಿ ಅಖಿಲ ಭಾರತ ವೀರಶೈವ ಮಹಾಸಭಾ ಗದಗ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ಮಾತನಾಡಿದರು. ವೇದಿಕೆಯ ಮೇಲೆ ಬಿ.ಎಸ್. ಪಾಟೀಲ, ರಘು ಪುರುಷೋತ್ತಮ, ವಿದ್ಯಾಧರ ದೊಡ್ಡಮನಿ, ಸಿದ್ಧಲಿಂಗಪ್ಪ ಚಳಗೇರಿ, ಸುರೇಶ ಅಂಗಡಿ ಉಪಸ್ಥಿತರಿದ್ದರು.

ಪಿ.ಪಿ.ಜಿ ಕಾಲೇಜಿನ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಟ್ರಸ್ಟ್ ಅಧ್ಯಕ್ಷ ಎಸ್.ಎಂ. ಗೌಡರ ಸ್ವಾಗತಿಸಿದರು, ಆರ್.ಜಿ. ಚಿಕ್ಕಮಠ ಪರಿಚಯಿಸಿದರು. ಆನಂದಯ್ಯ ವಿರಕ್ತಮಠ ನಿರೂಪಿಸಿದರೆ, ಕೊನೆಗೆ ಅಪ್ಪಣ್ಣ ಗೌಡರ ವಂದಿಸಿದರು. ಸಮಾರಂಭದಲ್ಲಿ ನಗರದ ಬಿಎಡ್ ಕಾಲೇಜುಗಳ ಪ್ರಶಿಕ್ಷಣಾರ್ಥಿಗಳು, ಗಣ್ಯರು ಪಾಲ್ಗೊಂಡಿದ್ದರು.

> ಹಳೆಯದನ್ನು ನಿರಂತರವಾಗಿ ಮರೆಯುವ, ಅಗೌರವಿಸುದನ್ನು ನಿಲ್ಲಿಸದಿದ್ದರೆ ದುರಂತವಾದೀತು. ನಮ್ಮತನ ಇರುವ ಸಮಾಜವನ್ನು ಕಟ್ಟಬೇಕು. ನಾವು ನಮ್ಮ ನಡಾವಳಿಯನ್ನು ತಿದ್ದಿಕೊಳ್ಳದಿದ್ದರೆ ನಮ್ಮ ಬದುಕು ಅನ್ಯಮಾರ್ಗಕ್ಕೆ ಸಾಗುವದು ಎಂದರಲ್ಲದೆ, ಗದುಗಿನ ಬಗ್ಗೆ ನನಗೆ ವಿಶೇಷ ಪ್ರೀತಿ, ಗೌರವವಿದೆ. ಸಂಗೀತ, ಸಾಹಿತ್ಯ, ಸಾಂಸ್ಕೃತಿಕ ಹಾಗೂ ಧಾರ್ಮಿಕತೆಗೆ ತನ್ನದೇ ಆದ ಬಹು ದೊಡ್ಡ ಕೊಡುಗೆ ನೀಡಿದೆ. ಅದು ಗದುಗಿನ ಶ್ರೇಷ್ಠತೆಯ ಕೂಡ. ಕನ್ನಡ ಭಾಷೆ, ಕನ್ನಡಿಗರು ಮನುಷ್ಯತ್ವವನ್ನು ನಿರಂತರವಾಗಿ ಹೇಳಿಕೊಂಡು ಬಂದವರು, ಪಾಲಿಸಿಕೊಂಡು ಬಂದವರು ಈ ಪರಂಪರೆ ಮುಂದುವರೆಯಬೇಕೆಂದು ನಾಗಾಭರಣ ಅಭಿಪ್ರಾಯಪಟ್ಟರು.

### ನವೀಕೃತ ದಕ್ಷಿಣ ಸಿಆರ್‌ಸಿ ಕೇಂದ್ರದ ಮಕ್ಕಳ ಸ್ನೇಹಿ ಗ್ರಂಥಾಲಯ ಉದ್ಘಾಟನೆ

# ಕೇಂದ್ರದ ಸದುಪಯೋಗಕ್ಕೆ ಆದ್ಯತೆ ನೀಡಿ



> ಸಂಪನ್ಮೂಲ ವ್ಯಕ್ತಿ ಸತೀಶ ಬೋಮಲೆ ಪ್ರಾಸ್ತಾವಿಕವಾಗಿ ಮಾತನಾಡಿ, ಇಲ್ಲಿ ಶಿಕ್ಷಕರ ಆನ್‌ಲೈನ್ ಸೇವೆಗಳ ಮಾಹಿತಿ, ಕ್ಲಸ್ಟರ್ ನಕ್ಷೆ, ಕ್ಲಸ್ಟರ್‌ನ ಎಲ್ಲಾ ಶಾಲೆಗಳ ಸಂಪೂರ್ಣವಾದ ಮಾಹಿತಿಯಿದ್ದು, ಕೇಂದ್ರ ಸಿದ್ಧವಾಗಲು ಎಲ್ಲ ಶಾಲೆಗಳ ಶಿಕ್ಷಕರ, ಹಿರಿಯರ ಸಹಕಾರ ಅಪಾರವಾಗಿದೆ ಎಂದು ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಲಾಖೆ [illegible] ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನದೊಂದಿಗೆ ಶೈಕ್ಷಣಿಕ ಮಟ್ಟ ಸುಧಾರಣೆ, ಸಾಧನೆಯಲ್ಲಿ ಸಮೂಹ ಸಂಪನ್ಮೂಲ ಕೇಂದ್ರಗಳ ಪಾತ್ರ ಮಹತ್ವದ್ದಾಗಿದೆ ಎಂದು ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ್ ಮತ್ತು ಹಾನಗಲ್ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ಸಾಲಿಮಠ ಅಭಿಪ್ರಾಯಪಟ್ಟರು

ಅವರು ಶನಿವಾರ ಪಟ್ಟಣದ ಸರ್ಕಾರಿ ಮಾದರಿ ಹೆಣ್ಣುಮಕ್ಕಳ ಪ್ರಾಥಮಿಕ ಶಾಲೆಯಲ್ಲಿ ನವೀಕೃತಗೊಂಡ ದಕ್ಷಿಣ ಸಿಆರ್‌ಸಿ ಕೇಂದ್ರದ ಮಕ್ಕಳ ಸ್ನೇಹಿ ಗ್ರಂಥಾಲಯ ಉದ್ಘಾಟಿಸಿ ಮಾತನಾಡಿದರು.


ಸಮೂಹ ಸಂಪನ್ಮೂಲ ಶಿಕ್ಷಕರು ಇಲಾಖೆ, ಶಿಕ್ಷಕರು, ಪಾಲಕರು, ಮಕ್ಕಳು, ಸಮುದಾಯದ ನಡುವಿನ ಕೊಂಡಿಯಾಗಿ ಕಾರ್ಯ ನಿರ್ವಹಿಸುತ್ತಾರೆ. ಲಕ್ಷ್ಮೇಶ್ವರ ಕ್ಲಸ್ಟರ್ ಸಂಪನ್ಮೂಲ ಕೇಂದ್ರವನ್ನು ಇಲ್ಲಿನ ಸಂಪನ್ಮೂಲ ವ್ಯಕ್ತಿ ಸತೀಶ ಬೋಮಲೆ ಅವರು ಕ್ಲಸ್ಟರಿನ ಎಲ್ಲಾ ಶಿಕ್ಷಕರ ಸಹಕಾರದಿಂದ ಹಾಗೂ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳ ಆರ್ಥಿಕ ನೆರವಿನಿಂದ ಪುನಶ್ಚೇತನಗೊಳಿಸುವಲ್ಲಿ ಯಶಸ್ವಿಯಾಗಿದ್ದಾರೆ. ಎಲ್ಲರ ಸಹಕಾರದಿಂದ ಸಿದ್ಧವಾಗಿರುವ ಈ ಕೇಂದ್ರದ ಸದುಪಯೋಗಕ್ಕೆ ಶಿಕ್ಷಕರು ಆದ್ಯತೆ ನೀಡಬೇಕು ಎಂದರು.

ವೇದಿಕೆ ಕಾರ್ಯಕ್ರಮ ಉದ್ಘಾಟಿಸಿದ ನೋಡಲ್ ಅಧಿಕಾರಿ ಎಚ್.ಬಿ. ರಡ್ಡೇರ್ ಮಾತನಾಡಿ, ಶಿಕ್ಷಣ ಇಲಾಖೆಯ ಪ್ರತಿ ಕ್ಲಸ್ಟರ್‌ಗೆ ಒಂದು ಸಮೂಹ ಸಂಪನ್ಮೂಲ ಕೇಂದ್ರ ಸ್ಥಾಪಿಸಲಾಗಿದೆ ಹಾಗೂ ಇವು ಶಿಕ್ಷಕರ ತರಗತಿ ಪ್ರಕ್ರಿಯೆಯ ಸವಾಲುಗಳನ್ನು, ತರಗತಿ ಪ್ರಕ್ರಿಯೆಯ ನಾವೀನ್ಯತೆ ಕಲಿಯುವ ಸ್ಥಳವಾಗಿದೆ ಎಂದರು.

ಸಭೆಯಲ್ಲಿ ಪುರಸಭೆ ಸದಸ್ಯ ರಾಜಣ್ಣ ಕುಂಬಿ, ಈಶ್ವರ ಮೆಡ್ಲೇರಿ, ಎಸ್‌ಡಿಎಂಸಿ ಅಧ್ಯಕ್ಷ ಮಲ್ಲೇಶಪ್ಪ ಬಸಾಪೂರ, ಶಿಕ್ಷಕರಾದ ಬಿ.ಎಸ್. ಹರ್ಲಾಪುರ, ಚಂದ್ರು ನೇಕಾರ, ಗೀತಾ ಹಳ್ಯಾಳ, ಎಂ.ಎ ನದಾಫ್, ಎಸ್.ಕೆ. ಹವಾಲ್ದಾರ, ಪೂರ್ಣಾಜೆ ಕರಾಟೆ, ಎ.ಎಂ. ಮಠದ, ಎನ್.ಆರ್. ಸಾತಪುತೆ, ಎನ್.ಎಚ್. ಗುಂಜಳ, ನಿಖಿತಾ ಶೇರಖಾನೆ, ಆರ್.ಎಂ. ಶಿರಹಟ್ಟಿ, ಎಸ್.ವಿ. ಅಂಗಡಿ, ಹರೀಶ್ ಎಸ್, ಉಮೇಶ ಹುಚ್ಚಯ್ಯಮಠ, ಎಂ.ಎಂ. ಹವಳದ, ಬಸವರಾಜ ಯರಗುಪ್ಪಿ, ಆರ್. ಮಹಾಂತೇಶ, ಉಮೇಶ ನೇಕಾರ, ಎನ್.ಎ. ಮುಲ್ಲಾ, ಎಮ್.ಎಸ್. ಹಿರೇಮಠ, ತಾಲೂಕಿನ ಎಲ್ಲಾ ಇಸಿಓ, ಬಿಆರ್‌ಪಿ, ಸಿಆರ್‌ಪಿ ಮತ್ತು ಎಲ್ಲಾ ಶೈಕ್ಷಣಿಕ ಸಂಘಗಳ ಪದಾಧಿಕಾರಿಗಳು, ಲಕ್ಷ್ಮೇಶ್ವರ ಉತ್ತರ, ದಕ್ಷಿಣ ಕ್ಲಸ್ಟರನ ಮುಖ್ಯ ಶಿಕ್ಷಕರು, ಸಹ ಶಿಕ್ಷಕರು ಉಪಸ್ಥಿತರಿದ್ದರು.

ಮುಖ್ಯೋಪಾಧ್ಯಾಯ ಬಿ.ಎಂ. ಕುಂಬಾರ, ಎಚ್.ಡಿ. ನಿಂಗರೆಡ್ಡಿ, ಸ್ವಪ್ನಾ ಕಾಳೆ, ಲಕ್ಷ್ಮೀ ಹತ್ತಿಕಟ್ಟಿ, ಅಕ್ಷತಾ ಕಾಟೆಗಾರ, ಆರ್.ಕೆ. ಉಪನಾಳ ನಿರೂಪಿಸಿದರು. ಉಮೇಶ ನೇಕಾರ ವಂದಿಸಿದರು.

# ಬಸ್ ನಿಲ್ದಾಣದಲ್ಲಿ ಸಿಸಿ ಕ್ಯಾಮರಾ ಅಳವಡಿಸಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪಟ್ಟಣದ ಬಸ್ ನಿಲ್ದಾಣದಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸುವುದು ಹಾಗೂ ಶುದ್ಧ ಕುಡಿಯುವ ನೀರಿನ ಸೌಕರ್ಯವನ್ನು ಒದಗಿಸಬೇಕೆಂದು ಶನಿವಾರ ಕರ್ನಾಟಕ ಪ್ರಜಾಪರ ವೇದಿಕೆ ವತಿಯಿಂದ ವಾಕರಸಾ ಸಂಸ್ಥೆಯ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಾಧ್ಯಕ್ಷ ಹಸನ ತಹಸೀಲ್ದಾರ, ಶಿರಹಟ್ಟಿ ಪಟ್ಟಣಕ್ಕೆ ಪ್ರತಿದಿನ ಗ್ರಾಮೀಣ ಪ್ರದೇಶದಿಂದ ರೈತರು, ವ್ಯಾಪಾರಿಗಳು, ನೌಕರರು, ಸಾರ್ವಜನಿಕರು ವಿವಿಧ ಕಾರ್ಯಗಳ ನಿಮಿತ್ತ, ವಿದ್ಯಾರ್ಥಿಗಳು ಶಿಕ್ಷಣ ಪಡೆಯಲು ಆಗಮಿಸುತ್ತಾರೆ. ಹೀಗಾಗಿ ನಿತ್ಯವೂ ಬಸ್ ನಿಲ್ದಾಣ ಜನದಟ್ಟಣೆಯಿಂದ ಕೂಡಿರುತ್ತದೆ. ಪ್ರಯಾಣಿಕರ ಹಾಗೂ ಮಹಿಳೆಯರ ಹಿತದೃಷ್ಟಿಯಿಂದ ಸಿಸಿ ಕ್ಯಾಮರಾ ಅಳವಡಿಸಬೇಕು. ಪ್ರಯಾಣಿಕರಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೇ ಇರುವುದರಿಂದ ಅಕ್ಕಪಕ್ಕದ ಅಂಗಡಿಗಳಲ್ಲಿಯ ಅಶುದ್ಧ ನೀರು ಸೇವನೆ ಮಾಡುತ್ತಿದ್ದಾರೆ. ಕೂಡಲೇ ನಿಲ್ದಾಣದಲ್ಲಿ ಶುದ್ಧ ನೀರಿನ ಘಟಕ ಪ್ರಾರಂಭಿಸಬೇಕೆಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಶರೀಫ ಗುಡಿಮನಿ, ಭರಮಪ್ಪ ಎಚ್, ಸಾಧಿಕ ಮುಳಗುಂದ, ಕಳಕಪ್ಪ ಬಿಸನಹಳ್ಳಿ ಉಪಸ್ಥಿತರಿದ್ದರು.

### ಶ್ರಾವಣ ಸಂಜೆ ಕಾರ್ಯಕ್ರಮದ ಸಭೆ, ಆಮಂತ್ರಣ ಪತ್ರಿಕೆ ಬಿಡುಗಡೆ

# 19ನೇ ವರ್ಷದ ಶ್ರಾವಣ ಸಂಜೆ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಅಕ್ಕಾಮಹಾದೇವಿ ದೇವಸ್ಥಾನದಲ್ಲಿ ಪೂಜ್ಯ ಶ್ರೀ ಸಿದ್ದೇಶ್ವರ ಸತ್ಸಂಗ ಬಳಗ, ಶರಣ ಸಾಹಿತ್ಯ ಪರಿಷತ್, ಕದಳಿ ಮಹಿಳಾ ವೇದಿಕೆ, ರಾಜರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಂಸ್ಕೃತಿ ವೇದಿಕೆ, ಅಕ್ಕಮಹಾದೇವಿ ಬಳಗ, ಪ್ರೇಮಕ್ಕ ಅಭಿಮಾನಿ ಬಳಗ ಸಹಯೋಗದಲ್ಲಿ 19ನೇ ವರ್ಷದ ಶ್ರಾವಣ ಸಂಜೆ ಕಾರ್ಯಕ್ರಮ ಆ.5ರಿಂದ ಸೆ.3ರವರೆಗೆ ನಡೆಯಲಿದೆ ಎಂದು ತಾಲೂಕು ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ನಿರ್ಮಲಾ ಅರಳಿ ಮತ್ತು ಹಿರಿಯ ಸಾಹಿತಿ ಲಲಿತಕ್ಕ ಕೆರಿಮನಿ ಹೇಳಿದರು.

ಅವರು ಶನಿವಾರ ಪಟ್ಟಣದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ನಡೆಸಿದ ಪೂರ್ವಭಾವಿ ಸಭೆಯಲ್ಲಿ ಶ್ರಾವಣ ಮಾಸದುದ್ದಕ್ಕೂ ನಡೆಯುವ ಕಾರ್ಯಕ್ರಮಗಳ ಆಮಂತ್ರಣ ಪತ್ರಿಕೆಗಳನ್ನು ಬಿಡುಗಡೆಗೊಳಿಸಿ ಮಾಹಿತಿ ನೀಡಿದರು.

ಜು.5ರ ಸೋಮವಾರ ಸಂಜೆ 6ಕ್ಕೆ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಹೂವಿನಶಿಗ್ಲಿಯ ವೀರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯದಲ್ಲಿ ಉಚ್ಚ



ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ನಾಗರಾಜ ಅರಳಿ ಶ್ರಾವಣ ಸಂಜೆ ಕಾರ್ಯಕ್ರಮ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ವಹಿಸುವರು. ಅತಿಥಿಗಳಾಗಿ ಚಂದ್ರಣ್ಣ ಮಹಾಜನಶೆಟ್ಟರ, ಡಾ. ಪರಶುರಾಮು ಬಾರ್ಕಿ, ಡಾ. ಶಿವಾನಂದ ಹೂವಿನ, ಎಲ್.ಎಸ್. ಅರಳಹಳ್ಳಿ, ನಿರ್ಮಲಾ ಅರಳಿ ಉಪಸ್ಥಿತರಿರುವರು.

ಸೆಪ್ಟೆಂಬರ್ 3ರಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರ ಸಾನ್ನಿಧ್ಯದಲ್ಲಿ ಸಮಾರೋಪ ಸಮಾರಂಭ ಜರುಗಲಿದೆ.

ಕಳೆದ 18 ವರ್ಷಗಳಿಂದ ವಿವಿಧ ಮಹಿಳಾ ಸಂಘಟನೆಗಳ ಸಹಯೋಗದಲ್ಲಿ ಶ್ರಾವಣ ಮಾಸದಲ್ಲಿ ಧಾರ್ಮಿಕ ಚಿಂತನ–ಮಂಥನ, ಸತ್ಸಂಗದಂತಹ ಕಾರ್ಯಕ್ರಮಗಳನ್ನು ನಡೆಸುತ್ತಾ ಬರಲಾಗಿದೆ ಎಂದು ತಿಳಿಸಿದರು.

ಈ ವೇಳೆ ಕದಳಿ ಮಹಿಳಾ ವೇದಿಕೆಯ ಕಾರ್ಯದರ್ಶಿ ರತ್ನಾ ಕರ್ಕಿ, ಮಹಿಳಾ ಬಳಗದ ಸದಸ್ಯರಾದ ಅಶ್ವಿನಿ ಅಂಕಲಕೋಟಿ, ಪ್ರತಿಮಾ ಮಹಾಜನಶೆಟ್ಟರ, ವಿನುತಾ ಅರಳಿ, ಲತಾ ತಟ್ಟಿ, ಕಾಂಚನಾ ಹಸರಡ್ಡಿ, ಕವಿತಾ ಅರಳಹಳ್ಳಿ, ರೇಖಾ ವಡಕಣ್ಣನವರ, ಗಂಗಾಧರ ಅರಳಿ, ಶೈಲಾ ಆದಿ, ಶಕುಂತಲಾ ವಡಕಣ್ಣವರ, ಜಯಶ್ರೀ ಮತ್ತಿಗಟ್ಟಿ, ಎಂ.ಕೆ. ಕಳ್ಳಿಮಠ, ಬಸವರಾಜ ಬೆಂಡಿಗೇರಿ, ಪಾರ್ವತಿ ಕಳ್ಳಿಮಠ, ಶೋಭಾ ಗಾಂಜಿ, ಶಾರದಾ ಬಟಗುರ್ಕಿ, ವಿಜಯ ಹುಬ್ಬಳ್ಳಿ ಸೇರಿ ಹಲವರಿದ್ದರು.

> ಈ ಕಾರ್ಯಕ್ರಮಗಳ ರೂವಾರಿಯಾಗಿದ್ದ ದಿ. ಪ್ರೇಮಕ್ಕ ಬಿಂಕದಕಟ್ಟಿ ಅವರ ಅಗಲುವಿಕೆಯ ನಡುವೆಯೂ ಶ್ರಾವಣ ಮಾಸದ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ನಿತ್ಯ ಸಂಜೆ ನಡೆಯುವ ಕಾರ್ಯಕ್ರಮದಲ್ಲಿ ಶರಣರು, ಸಾಹಿತಿಗಳು, ಸಾಮಾಜಿ ಚಿಂತಕರು, ಸಂಪನ್ಮೂಲ ವ್ಯಕ್ತಿಗಳು, ಉಪನ್ಯಾಸಕರು ವಿಷಯ ಮಂಡನೆ ಮಾಡಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka